# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು

EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ


ಸಂಪುಟ : 01 ಸಂಚಿಕೆ : 43 ರಿ.ನಂ : ಕೆಎನ್ಎಎನ್ / 26 / ಎ5487 ಬಳ್ಳಾರಿ ಶುಕ್ರವಾರ ದಿನಾಂಕ : 21-08-2026 ಪುಟ : 04 ಬೆಲೆ : 2-00


# ನಕಲಿ ಔಷಧ ಪ್ರಕರಣ: ಎಸ್ಐಟಿಗೆ ಆದೇಶ

ಬೆಂಗಳೂರು : ಬೆಂಗಳೂರಿನ ದೊಡ್ಡೇರಿ ಹಾಗೂ ಬಿದದಿ ಸುತ್ತಮುತ್ತ ಪತ್ತೆಯಾಗಿರುವ ಬೃಹತ್ ನಕಲಿ ಔಷಧ ಜಾಲ ಪ್ರಕರಣ ಇದೀಗ ಮತ್ತಷ್ಟು ಗಂಭೀರ ಸ್ವರೂಪ ಪಡೆದುಕೊಂಡಿದೆ. ಪ್ರತಿಷ್ಠಿತ ಬಹುರಾಷ್ಟ್ರೀಯ ಕಂಪನಿಗಳ ಹೆಸರಿನಲ್ಲಿ ನಕಲಿ ಇಂಜೆಕ್ಷನ್‌ಗಳು ಮತ್ತು ಮಾತ್ರೆಗಳನ್ನು ತಯಾರಿಸಿ, ವಿವಿಧ ರಾಜ್ಯಗಳಿಗೆ ಪೂರೈಕೆ ಮಾಡುತ್ತಿದ್ದ ಆರೋಪ ಕೇಳಿಬಂದಿದೆ. ಈ ಪ್ರಕರಣವನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ಸಂಪೂರ್ಣ ತನಿಖೆಯನ್ನು ವಿಶೇಷ ತನಿಖಾ ತಂಡವಾದ ಎಸ್ಐಟಿಗೆ ವಹಿಸಿ ಆದೇಶಿಸಿದೆ. ಹಿರಿಯ ಐಪಿಎಸ್ ಅಧಿಕಾರಿ ಸಿ. ವಂಶಿಕೃಷ್ಣ ಅವರ ನೇತೃತ್ವದಲ್ಲಿ ಎಸ್ಐಟಿ ರಚಿಸಲಾಗಿದೆ. ಈಗಾಗಲೇ ಪ್ರಕರಣಕ್ಕೆ ಸಂಬಂಧಿಸಿದಂತೆ ನಾಲ್ವರನ್ನು ಬಂಧಿಸಲಾಗಿದ್ದು, ದಂಧೆಯ ಪ್ರಮುಖ ಕಿಂಗ್‌ಪಿನ್ ವಿದೇಶದಲ್ಲಿ ತಲೆಮರೆಸಿಕೊಂಡಿರುವ ಸಾಧ್ಯತೆ ಇದೆ ಎನ್ನಲಾಗಿದೆ. ಹೀಗಾಗಿ ಪ್ರಕರಣದ ಹಿಂದೆ ಇರುವ ಸಂಪೂರ್ಣ ಜಾಲವನ್ನು ಪತ್ತೆಹಚ್ಚಲು ಎಸ್ಐಟಿ ತನಿಖೆ ನಡೆಸಲಿದೆ. ವಂಶಿಕೃಷ್ಣ ನೇತೃತ್ವದ ತಂಡದಲ್ಲಿ ಐಪಿಎಸ್ ಅಧಿಕಾರಿಗಳಾದ ಶಿವಪ್ರಕಾಶ್ ಹಾಗೂ ಲೋಕೇಶ್, ಸಹಾಯಕ ಔಷಧ ನಿಯಂತ್ರಕರಾದ ಮಂಜುನಾಥ್ ರೆಡ್ಡಿ ಮತ್ತು ನಮ್ರತಾ ಹಲ್ಲೂರು, ಔಷಧ ನಿರೀಕ್ಷಕ ನೇಹಾ ಮುರ್ಗಿ ಅವರನ್ನು ಒಳಗೊಂಡಂತೆ ತಂಡ ರಚಿಸಲಾಗಿದೆ. ಇದರ ನಡುವೆ, ಕರ್ನಾಟಕದ ಡ್ರಗ್ ಎನ್‌ಫೋರ್ಸ್‌ಮೆಂಟ್ ವಿಂಗ್ ಅಧಿಕಾರಿಗಳು ಆಗಸ್ಟ್ 18ರಂದು ಬಿದದಿ ಸಮೀಪದ ನಂ.34 ಕುರುಬರಹಳ್ಳಿ ಗ್ರಾಮದಲ್ಲಿದ್ದ ಪರವಾನಗಿ ಇಲ್ಲದ ಔಷಧ ತಯಾರಿಕಾ ಘಟಕದ ಮೇಲೆ ದಾಳಿ ನಡೆಸಿದ್ದರು. ದಾಳಿ ವೇಳೆ ಅಪಾರ ಪ್ರಮಾಣದ ನಕಲಿ ಔಷಧಗಳು, ಬಲ್ಕ್ ಸ್ಟಾಕ್, ಪ್ಯಾಕೇಜಿಂಗ್ ಯಂತ್ರಗಳು, ಖಾಲಿ ವಯಲ್‌ಗಳು ಹಾಗೂ ನಕಲಿ ಲೇಬಲ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ. ವಶಪಡಿಸಿಕೊಂಡ ವಸ್ತುಗಳ ಒಟ್ಟು ಅಂದಾಜು ಮೌಲ್ಯ 5.05 ಕೋಟಿ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ವಿಶೇಷವಾಗಿ ಕ್ಯಾನ್ಸರ್ ಸೇರಿದಂತೆ ಗಂಭೀರ ಕಾಯಿಲೆಗಳ ಚಿಕಿತ್ಸೆಯಲ್ಲಿ ಬಳಸುವ ದುಬಾರಿ ಔಷಧಗಳ ಹೆಸರನ್ನು ದುರ್ಬಳಕೆ ಮಾಡಿಕೊಂಡಿರುವ ಆರೋಪ ಪ್ರಕರಣದ ಆತಂಕವನ್ನು ಮತ್ತಷ್ಟು ಹೆಚ್ಚಿಸಿದೆ. ಈ ನಕಲಿ ಔಷಧಗಳು ಎಲ್ಲಿಂದ ತಯಾರಾಗುತ್ತಿದ್ದವು, ಯಾರಿಗೆ ಪೂರೈಕೆಯಾಗುತ್ತಿದ್ದವು, ಇದರ ಹಿಂದೆ ಯಾರು ಇದ್ದಾರೆ ಮತ್ತು ದೇಶದ ಬೇರೆ ರಾಜ್ಯಗಳಲ್ಲೂ ಈ ಜಾಲ ಹರಡಿದೆಯೇ ಎಂಬ ಪ್ರಮುಖ ಅಂಶಗಳ ಕುರಿತು ಎಸ್ಐಟಿ ತನಿಖೆ ನಡೆಸಲಿದೆ. ನಕಲಿ ಔಷಧಗಳ ಮೂಲಕ ಜನರ ಜೀವಕ್ಕೆ ಅಪಾಯ ಉಂಟುಮಾಡುವ ಇಂತಹ ದಂಧೆಯ ಹಿಂದಿರುವ ಪ್ರಮುಖ ಆರೋಪಿಗಳನ್ನು ಪತ್ತೆಹಚ್ಚಿ ಕಠಿಣ ಕಾನೂನು ಕ್ರಮ ಕೈಗೊಳ್ಳುವ ಸಾಧ್ಯತೆ ಇದೆ.



## ಮಹಾತ್ಮಾ ಗಾಂಧಿಯವರ ಹಸ್ತಪ್ರತಿ, ದಾಖಲೆಯ 16.2 ಕೋಟಿ ರೂ ಗೆ ಮಾರಾಟ!



ನವದೆಹಲಿ: ಸತ್ಯ, ಅಹಿಂಸೆ ಮತ್ತು ಸೇವೆ ಮುಂತಾದ ವಿಷಯಗಳ ಕುರಿತು ಮಹಾತ್ಮಾ ಗಾಂಧಿಯವರು ತಮ್ಮ ಆಪ್ತ ಸಹವರ್ತಿ ಹಾಗೂ ಸ್ವಾತಂತ್ರ್ಯ ಹೋರಾಟಗಾರ ಆನಂದ್ ಟಿ. ಹಿಂಗೊರಾನಿ ಅವರಿಗೆ ಬರೆದ 688 ಸಹಿ ಮಾಡಿದ ಬರಹಗಳ ಸಂಗ್ರಹ (ಹಸ್ತಪ್ರತಿ) 'ಸಫ್ರಾನ್-ಆರ್ಟ್' ಹರಾಜಿನಲ್ಲಿ ದಾಖಲೆಯ 16.20 ಕೋಟಿ ರೂ.ಗೆ ಮಾರಾಟವಾಗಿದೆ. ಹರಾಜಿನಲ್ಲಿ ಭಾರತೀಯ ಐತಿಹಾಸಿಕ ದಾಖಲೆಯೊಂದು ಇಷ್ಟೊಂದು ಮೊತ್ತಕ್ಕೆ ಮಾರಾಟವಾದದ್ದು ವಿಶ್ವ ದಾಖಲೆಯಾಗಿದೆ.

ಹಿಂಗೊರಾನಿ ಅವರ ಪತ್ನಿ ವಿದ್ಯಾ ಅವರ ನಿಧನದ ನಂತರದ ಎರಡು ವರ್ಷಗಳ ಅವಧಿಯಲ್ಲಿ ಬರೆಯಲಾದ

2ನೇ ಪುಟಕ್ಕೆ...

## ಹಣಕ್ಕಾಗಿ ಪ್ರಾಂಶುಪಾಲರನ್ನೆ ಕೊಂದ ವಿದ್ಯಾರ್ಥಿಗಳು



ಹೈದರಾಬಾದ್, ಆ.20- ತಮ ಮೋಜಿನ ಹಣಕ್ಕಾಗಿ ಇಬ್ಬರು ವಿದ್ಯಾರ್ಥಿಗಳು ನಾಗರ್ಜುನ ಪಬ್ಲಿಕ್ ಶಾಲೆಯ ಪ್ರಾಂಶುಪಾಲರನ್ನ 27 ಬಾರಿ ಇರಿದುಕೊಂದಿರುವ ಘಟನೆ ತೆಲಂಗಾಣದ ನಲ್ಲಗೊಂಡದಲ್ಲಿ ನಡೆದಿದೆ. ತೆಲಂಗಾಣದ ನಲ್ಲಗೊಂಡ ಪೊಲೀಸರು 48 ವರ್ಷದ ಶಾಲಾ ಪ್ರಾಂಶುಪಾಲರ ಸಂಚಲನ ಮೂಡಿಸಿದ ಕೊಲೆ ಪ್ರಕರಣವನ್ನು ಭೇದಿಸುವಲ್ಲಿ ಯಶಸ್ವಿಯಾಗಿದ್ದು, ಹಣ ಮತ್ತು ದುಂದು ವೆಚ್ಚಕ್ಕಾಗಿ ಕೊಲೆ ಮಾಡಿದ್ದ ಇಬ್ಬರು ವಿದ್ಯಾರ್ಥಿಗಳನ್ನು ಬಂಧಿಸಿದ್ದಾರೆ.

ಇಲ್ಲಿನ ಕೊಂಡಮಲ್ಲೇಪಲ್ಲಿಯಲ್ಲಿರುವ ನಾಗಾರ್ಜುನ ಪಬ್ಲಿಕ್ ಶಾಲೆಯ ಪ್ರಾಂಶುಪಾಲರು ಮತ್ತು ನಿರ್ದೇಶಕಿ ಕಲ್ಲು ರೂಪಾ ರೆಡ್ಡಿ ಅವರನ್ನು ಕೆಲ ದಿನಗಳ ಹಿಂದೆ ಕೊಂಡಮಲ್ಲೇಪಲ್ಲಿಯಲ್ಲಿರುವ ಅವರ ನಿವಾಸದಲ್ಲಿ 27 ಬಾರಿ ಇರಿದು ಕೊಲೆ ಮಾಡಲಾಗಿತ್ತು. 2ನೇ ಪುಟಕ್ಕೆ..



## ವರಮಹಾಲಕ್ಷ್ಮಿ ಹಬ್ಬದ ವಿಶೇಷತೆ

ಯಾವುದಾದರೂ ವ್ರತ ಮಾಡುತ್ತೇವೆ ಎಂದರೆ ಮೊದಲು ಆ ದೇವತೆಯ ಮಹಿಮೆಯನ್ನು ಸ್ವಲ್ಪ ಮಟ್ಟಿಗಾದರೂ ಅರ್ಥೈಸಿಕೊಂಡು ಮಾಡಿದರೆ ಆ ವ್ರತದ ಫಲವು ನಮಗೆ ಸಿಗುತ್ತದೆ. ವರಮಹಾಲಕ್ಷ್ಮಿ ವ್ರತವೆಂದರೆ ಜಗಜ್ಜನನಿಯಾದ ಲಕ್ಷ್ಮೀ ದೇವಿಯ ಪೂಜೆ. ಆಕೆಯ ಬಗ್ಗೆ ಎಷ್ಟು ಹೇಳಿದರೂ ಅದು ಸ್ವಲ್ಪ ಮಾತ್ರವೇ ಆಗುತ್ತದೆ.

ಪರಮಾತ್ಮ ಮತ್ತು ಲಕ್ಷ್ಮೀ ದೇವಿ ಇಬ್ಬರೂ ಅಕ್ಷರ ಪುರುಷರು. ಅಕ್ಷರ ಪುರುಷರು ಎಂದರೆ ನಿತ್ಯಮುಕ್ತರು, ದೇಹನಾಶವಿಲ್ಲದವರು. ಬ್ರಹ್ಮ ದೇವರಿಂದ ತೃಣಜೀವರ ಪರ್ಯಂತ ಎಲ್ಲರೂ ಕ್ಷರ ಪುರುಷರು. ಅಂದರೆ ದೇಹನಾಶವುಳ್ಳವರು. ಆದರೆ ಜಗಜ್ಜನನಿಯಾದ ಮಹಾಲಕ್ಷ್ಮಿಗೆ ದೇಹನಾಶವಿಲ್ಲ. ಆ ಮಹಾತಾಯಿ ಪರಮಾತ್ಮನಿಗೆ ದೇಶತಃ, ಕಾಲತಃ ಸಮಳು. ಗುಣದಲ್ಲಿ ಪರಮಾತ್ಮನ ಅಧೀನಳು.

ಆದ್ದರಿಂದ ಅವಳು ಪರಮಾತ್ಮನಿಗೆ ಸಮಾನ ಎಂದು ಅನಿಸಿಕೊಂಡಿದ್ದಾಳೆ. ಅಚಿಂತ್ಯಾತೀತ ಗುಣವುಳ್ಳ ಪರಮಾತ್ಮನ ಸೇವೆಯನ್ನು ಯಾರಿಗೂ ಬಿಟ್ಟು ಕೊಡುವುದಿಲ್ಲ. ಛತ್ರ, ಚಾಮರ, ವ್ಯಜನ, ಪರ್ಯಂಕ ಎಲ್ಲವೂ ತಾನೇ ಆಗಿ ಪರಮಾತ್ಮನ ಸೇವೆಯನ್ನು ಪೂರ್ಣವಾಗಿ ಮಾಡಿ ಆನಂದ ಹೊಂದುತ್ತಾಳೆ.


ಪ್ರಳಯ ಕಾಲದಲ್ಲಿ ಎಲ್ಲವೂ ನಾಶವಾದರೂ ಲಕ್ಷ್ಮೀದೇವಿಯು ಮಾತ್ರ ಜಲವಾಗಿ, ಆಲದೆಲೆಯಾಗಿ, ಕತ್ತಲಾಗಿ, ಹಲವು ಆಭರಣಗಳಾಗಿ ಪರಮಾತ್ಮನ ಜೊತೆಯಲ್ಲೇ ಶ್ರೀ, ಭೂ ಮತ್ತು ದುರ್ಗಾ ಎಂಬ ಮೂರು ರೂಪಗಳಿಂದ ಪರಮಾತ್ಮನ ಸೇವೆಯನ್ನು ಮಾಡುತ್ತಾಳೆ. ಜಗಜ್ಜನನಿಯಾದ ಶ್ರೀ ಮಹಾಲಕ್ಷ್ಮಿಯ ಪೂಜೆ ಮಾಡಬೇಕಾದರೆ ನಮಗೆ ಇವೆಲ್ಲದರ ಬಗ್ಗೆ ಸ್ವಲ್ಪವಾದರೂ ಜ್ಞಾನವಿರಬೇಕು. ಶ್ರಾವಣ ಮಾಸದ ಶುಕ್ಲ ಪಕ್ಷದ ಎರಡನೇ ಶುಕ್ರವಾರ ವರಮಹಾಲಕ್ಷ್ಮಿ ವ್ರತವಾಗಿರುತ್ತದೆ. ಈ ವ್ರತ ಮಾಡಬೇಕಾದರೆ ತುಳಸಿ ಬೃಂದಾವನದ ಹತ್ತಿರ ಯಮುನಾ ಪೂಜೆಯನ್ನು ಮಾಡಬೇಕು. ಯಾವುದೇ ವ್ರತವನ್ನು ನದೀತೀರದಲ್ಲಿಯೇ ಆಚರಿಸುವುದು ಉತ್ತಮ. ಆದರೆ ಈಗಿನ ದೇಶ-ಕಾಲ 2ನೇ ಪುಟಕ್ಕೆ...

## ಅನ್ನಭಾಗ್ಯ ಅಕ್ಕಿ ಅಕ್ರಮ ಅಡ್ಡೆ ಮೇಲೆ ದಾಳಿ - ಆಹಾರ ಇಲಾಖೆ ಭರ್ಜರಿ ಕಾರ್ಯಾಚರಣೆ

ಬೆಂಗಳೂರು: ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಅನ್ನಭಾಗ್ಯ ಯೋಜನೆಯಡಿ ನ್ಯಾಯಬೆಲೆ ಅಂಗಡಿಗಳ ಮೂಲಕ ವಿತರಿಸಲಾಗುವ ಅಕ್ಕಿ ಮತ್ತು ರಾಗಿಯನ್ನು ಅಕ್ರಮವಾಗಿ ಖರೀದಿಸಿ, ಮರುಮಾರಾಟ ಮಾಡುತ್ತಿದ್ದ ಆರೋಪದ ಹಿನ್ನೆಲೆಯಲ್ಲಿ ಆಹಾರ ಇಲಾಖೆ ಅಧಿಕಾರಿಗಳು ಬೆಂಗಳೂರಿನ ಕೆ.ಪಿ. ಅಗ್ರಹಾರ ವ್ಯಾಪ್ತಿಯಲ್ಲಿ ದಾಳಿ ನಡೆಸಿದ್ದಾರೆ.

ಕೆ.ಪಿ. ಅಗ್ರಹಾರದ ರಸ್ತೆಯೊಂದರಲ್ಲಿರುವ ಪುಟ್ಟ ಕೋಣೆಯಲ್ಲಿ ಸೆಲ್ವಂ ಎಂಬ ವ್ಯಕ್ತಿ ಬಿಪಿಎಲ್ ಕಾರ್ಡ್‌ದಾರರಿಂದ ಅಕ್ಕಿ ಹಾಗೂ ರಾಗಿ ಖರೀದಿಸಿ, ರೈಸ್ ಟ್ರೇಡರ್ಸ್‌ಗಳಿಗೆ ಮರುಮಾರಾಟ ಮಾಡುತ್ತಿದ್ದ ಆರೋಪ ಕೇಳಿಬಂದಿದೆ. ಅಧಿಕಾರಿಗಳ ಪ್ರಕಾರ, ದಾಳಿ ನಡೆದ ದಿನವೇ ಸುಮಾರು 12 ಕ್ವಿಂಟಲ್ ರಾಗಿಯನ್ನು ಮಾರಾಟ ಮಾಡಲಾಗಿತ್ತು.

ಬೆಂಗಳೂರು ನಗರದ ಆಹಾರ ಇಲಾಖೆಯ ಹೆಚ್ಚುವರಿ ನಿರ್ದೇಶಕ ಪಾತರಾಜ್,





ಈ ಬಗ್ಗೆ ಮಾತನಾಡಿ, ಅನ್ನಭಾಗ್ಯ ಯೋಜನೆಯಡಿ ಅಕ್ಕಿ ಮತ್ತು ರಾಗಿಯನ್ನು ವಿತರಿಸಲಾಗುತ್ತಿದ್ದು, ಅವುಗಳನ್ನು ಅಕ್ರಮವಾಗಿ ಮಾರಾಟ ಮಾಡಲಾಗುತ್ತಿದೆ ಎಂಬ ಮಾಹಿತಿ ಇಲಾಖೆಗೆ ಲಭ್ಯವಾಗಿತ್ತು. ವಿಚಾರಣೆ ನಡೆಸಿದಾಗ, ದಾಳಿ ನಡೆದ ದಿನ ಸುಮಾರು 12 ಕ್ವಿಂಟಲ್ ರಾಗಿಯನ್ನು ಮಾರಾಟ ಮಾಡಿರುವುದು ಬೆಳಕಿಗೆ ಬಂದಿದೆ. ಈ ಅಕ್ರಮದಲ್ಲಿ ಭಾಗಿಯಾಗಿರುವವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ. ಇನ್ನೂ ಪಶ್ಚಿಮ ವಲಯದ ಜಂಟಿ ನಿರ್ದೇಶಕಿ ಸವಿತಾ ಮಾತನಾಡಿ, ಸೆಲ್ವಂ ಎಂಬ ವ್ಯಕ್ತಿ ಅಕ್ಕಿ ಮತ್ತು ರಾಗಿಯನ್ನು ಖರೀದಿಸಿ ಮಾರಾಟ ಮಾಡುತ್ತಿದ್ದ ಆರೋಪವಿದೆ. ವಿಚಾರಣೆ ವೇಳೆ ಅಕ್ಕಿ ಮತ್ತು ರಾಗಿ ಮಾರಾಟ ಮಾಡುತ್ತಿದ್ದುದನ್ನು ಆತ ಒಪ್ಪಿಕೊಂಡಿದ್ದಾನೆ. ಸ್ಥಳದಲ್ಲಿ ಪ್ಲಾಸ್ಟಿಕ್ ಚೀಲ, ದಾರ ಹಾಗೂ ತೂಕದ ಯಂತ್ರ ಪತ್ತೆಯಾಗಿದೆ. 2ನೇ ಪುಟಕ್ಕೆ...

## ಹಗರಣದ ಭಯ ಡಿಕೆಶಿಗೆ ಕಾಡುತ್ತಿದೆ: ಶ್ರೀರಾಮುಲು ಆರೋಪ



ಬಳ್ಳಾರಿ : ವಾಲ್ಮೀಕಿ ನಿಗಮದ ಹಗರಣ ಪ್ರಕರಣದಲ್ಲಿ ಸಚಿವ ಬಿ. ನಾಗೇಂದ್ರ ಸತ್ಯ ಹೇಳಿದರೆ ಕಾಂಗ್ರೆಸ್‌ನ ಪ್ರಮುಖ ನಾಯಕರ ಹೆಸರುಗಳು ಹೊರಬೀಳುವ ಭಯ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಕಾಡುತ್ತಿದೆ ಎಂದು ಮಾಜಿ ಸಚಿವ ಬಿ. ಶ್ರೀರಾಮುಲು ಆರೋಪಿಸಿದರು.ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಾಲ್ಮೀಕಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣದಲ್ಲಿ ಹಲವು ಗಂಭೀರ ವಿಚಾರಗಳು ಹೊರಬಂದಿವೆ. ಸಚಿವ ಬಿ. ನಾಗೇಂದ್ರ ಅವರ ಆಪ್ತ ಕಾರ್ಯದರ್ಶಿಯ ಡಿಜಿಟಲ್ ಸಹಿಯ ಡೈರಿಯಲ್ಲಿ ಯಾರಿಗೆ ಎಷ್ಟು ಹಣ ತಲುಪಿದೆ ಎಂಬುದರ ವಿವರಗಳಿವೆ ಎಂದು ಆರೋಪಿಸಿದರು.

ಈ ದಾಖಲೆಗಳಲ್ಲಿ ಕೆಲವು ಶಾಸಕರ ಹೆಸರುಗಳೂ ಉಲ್ಲೇಖವಾಗಿವೆ ಎಂದು ಹೇಳಿದ ಶ್ರೀರಾಮುಲು, ಪ್ರಕರಣದ ಸಂಪೂರ್ಣ ಸತ್ಯ ಹೊರಬರಬೇಕಾದರೆ ನಿಷ್ಪಕ್ಷಪಾತ ತನಿಖೆ ನಡೆಯಬೇಕು ಎಂದು ಒತ್ತಾಯಿಸಿದರು.

ವಾಲ್ಮೀಕಿ ನಿಗಮದ ಪ್ರಕರಣದಲ್ಲಿ ಸಚಿವ ಬಿ. ನಾಗೇಂದ್ರ ಅವರ ರಕ್ಷಣೆಗೆ ಕಾಂಗ್ರೆಸ್‌ನ ಯಾವುದೇ ಶಾಸಕರು ಮುಂದೆ ಬರುತ್ತಿಲ್ಲ.

ಬದಲಾಗಿ ಅವರೇ ತಪ್ಪು ಮಾಡಿರುವ ಬಗ್ಗೆ ಮಾತನಾಡುತ್ತಿದ್ದಾರೆ ಎಂದು ಶ್ರೀರಾಮುಲು

2ನೇ ಪುಟಕ್ಕೆ...

## ಕರ್ನಾಟಕದ 440 ಪ್ರಥಮ ದರ್ಜೆ ಕಾಲೇಜುಗಳ ಪೈಕಿ 428ಕ್ಕೆ ಪ್ರಾಂಶುಪಾಲರೇ ಇಲ್ಲ!

ಬೆಂಗಳೂರು: ಕರ್ನಾಟಕದ 440 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪೈಕಿ 428 ಕಾಲೇಜುಗಳು ಪ್ರಾಂಶುಪಾಲರಿಲ್ಲದೆ ಕಾರ್ಯನಿರ್ವಹಿಸುತ್ತಿವೆ ಎಂದು ಉನ್ನತ ಶಿಕ್ಷಣ ಸಚಿವ ಬಸವರಾಜ ರಾಯರೆಡ್ಡಿ ವಿಧಾನ ಪರಿಷತ್‌ಗೆ ತಿಳಿಸಿದ್ದಾರೆ. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ ಅಗತ್ಯ ಮೂಲಸೌಕರ್ಯಗಳೊಂದಿಗೆ ಹೊಸ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ಥಾಪಿಸಲು ಅನುದಾನ ನೀಡುವಂತೆ ವಿಧಾನ ಪರಿಷತ್ ಸದಸ್ಯ ಕೆ. ಅಬ್ದುಲ್ ಜಬ್ಬಾರ್ ಅವರು ಗಮನ ಸೆಳೆಯುವ ಸೂಚನೆ ಮಂಡಿಸಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ ಸಚಿವರು ಈ ಮಾಹಿತಿ ನೀಡಿದರು. ಪ್ರಾಂಶುಪಾಲರ ಹುದ್ದೆಗಳ ಖಾಲಿ ಸ್ಥಾನಗಳನ್ನು ಹಂತ ಹಂತವಾಗಿ ಭರ್ತಿ ಮಾಡಲಾಗುತ್ತಿದೆ. ಆದರೆ, ಈಗಿರುವ ಕಾಲೇಜುಗಳ ಮೂಲಸೌಕರ್ಯವನ್ನು ಬಲಪಡಿಸುವುದಕ್ಕೆ



ಸರ್ಕಾರ ಆದ್ಯತೆ ನೀಡಲಿದ್ದು, ತಕ್ಷಣವೇ ಹೊಸ ಕಾಲೇಜುಗಳನ್ನು ಸ್ಥಾಪಿಸುವುದಿಲ್ಲ ಎಂದು ಸರ್ಕಾರದ ಉತ್ತರದಲ್ಲಿ ತಿಳಿಸಲಾಗಿದೆ. ದಾವಣಗೆರೆ ಜಿಲ್ಲೆಯಲ್ಲಿ ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಒಟ್ಟು 19 ಪದವಿ ಕಾಲೇಜುಗಳಿವೆ. ಇವುಗಳಲ್ಲಿ 11 ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಹಾಗೂ ಎಂಟು ಖಾಸಗಿ ಅನುದಾನಿತ ಪದವಿ ಕಾಲೇಜುಗಳಿವೆ. ಮೂಲಸೌಕರ್ಯ ಸೌಲಭ್ಯಗಳನ್ನು ಹೊಂದಿರುವ ಈ ಕಾಲೇಜುಗಳ ಪ್ರಯೋಜನವನ್ನು ದಾವಣಗೆರೆ ದಕ್ಷಿಣ ಕ್ಷೇತ್ರದ ವಿದ್ಯಾರ್ಥಿಗಳು ಪಡೆಯಬಹುದು ಎಂದು ಸರ್ಕಾರ ತಿಳಿಸಿದೆ. ಉನ್ನತ ಶಿಕ್ಷಣಕ್ಕೆ ಪ್ರವೇಶವನ್ನು ಸುಲಭಗೊಳಿಸುವ ಹಾಗೂ ದಾಖಲಾತಿ ಪ್ರಮಾಣವನ್ನು ಹೆಚ್ಚಿಸುವ ಉದ್ದೇಶದಿಂದ ಕ್ಷೇತ್ರದಲ್ಲಿ ಹೊಸ ಕಾಲೇಜು ಸ್ಥಾಪಿಸಬೇಕು ಎಂದು ಜಬ್ಬಾರ್ ಒತ್ತಾಯಿಸಿದರು. 2ನೇ ಪುಟಕ್ಕೆ...

# ಆ. 23ರಂದು ಸಂಗೊಳ್ಳಿ ರಾಯಣ್ಣನ ಬೃಹತ್ ಜಾತ್ರೆ

ವಿಜಯಪುರ : ನಗರದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಉತ್ಸವ ಸಮಿತಿ ವತಿಯಿಂದ ಇದೇ ಮೊದಲ ಬಾರಿಗೆ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನವರ ಬೃಹತ್ ಜಾತ್ರಾ ಮಹೋತ್ಸವವನ್ನು ಆ. 23ರಂದು ನಗರದ ದರಬಾರ ಪ್ರೌಢಶಾಲೆ ಮೈದಾನದಲ್ಲಿ ಆಯೋಜಿಸಲಾಗಿದೆ ಎಂದು ಹುಲಿಜಂತಿ ಪಟ್ಟದ ಶ್ರೀ ಮಹಾಳಿಂಗರಾಯ ಮಹಾರಾಜರು ತಿಳಿಸಿದರು.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯುವಕರಲ್ಲಿ ದೇಶಭಕ್ತಿ, ಶೌರ್ಯ, ಪರಾಕ್ರಮ, ಧೈರ್ಯ ಹಾಗೂ ಸ್ಥೈರ್ಯ ಬೆಳೆಸುವ ಉದ್ದೇಶದಿಂದ ರಾಯಣ್ಣನವರ ಬೃಹತ್ ಜಾತ್ರೆ ಆಯೋಜಿಸಲಾಗಿದೆ. ಈ ಹಿನ್ನೆಲೆಯಲ್ಲಿ ಜಿಲ್ಲೆಯಾದ್ಯಂತ ಯುವಕರ ತಂಡಗಳನ್ನು ರಚಿಸಿ ಪೂರ್ವಭಾವಿ ಸಭೆಗಳನ್ನು ನಡೆಸಲಾಗಿದ್ದು, ರಾಯಣ್ಣನ ಅಭಿಮಾನಿಗಳಿಗೆ ಅಧಿಕೃತ ಆಹ್ವಾನ ನೀಡಲಾಗಿದೆ. ರಾಜ್ಯದ ವಿವಿಧೆಡೆಯಿಂದ ಸಾವಿರಾರು ಅಭಿಮಾನಿಗಳು ಪಾಲ್ಗೊಳ್ಳುವ ನಿರೀಕ್ಷೆಯಿದೆ ಎಂದರು.

ಜಾತ್ರೆಯ ಪ್ರಮುಖ ಆಕರ್ಷಣೆಯಾಗಿ 12 ಅಡಿ ಎತ್ತರದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನ ಭವ್ಯ ಮೂರ್ತಿಯ ಮೆರವಣಿಗೆ ನಡೆಯಲಿದೆ. ನಗರದ ಆರಾಧ್ಯ ದೈವ ಶ್ರೀ ಸಿದ್ಧೇಶ್ವರ ದೇವಸ್ಥಾನದಿಂದ ಮೆರವಣಿಗೆಗೆ ಚಾಲನೆ ದೊರೆಯಲಿದ್ದು, ಗಾಂಧಿವೃತ್ತ, ಅಂಬೇಡ್ಕರ್ ವೃತ್ತ, ಕನಕದಾಸ ವೃತ್ತ ಮಾರ್ಗವಾಗಿ ದರಬಾರ ಪ್ರೌಢಶಾಲೆ ಮೈದಾನ ತಲುಪಲಿದೆ. ಮೆರವಣಿಗೆ ಬಳಿಕ ಮಧ್ಯಾಹ್ನ 1 ಗಂಟೆ- ಗೆ ಮೈದಾನದಲ್ಲಿ ಬೃಹತ್ ಬಹಿರಂಗ ಸಭೆ ನಡೆಯಲಿದೆ. ಡಿಜೆ ಸೌಂಡ್ ಮತ್ತು ಲೈಟಿಂಗ್ಸ್, ಡೊಳ್ಳು ಕುಣಿತ, ಗೊಂಬೆ ಕುಣಿತ ಸೇರಿದಂತೆ ವಿವಿಧ ಕಲಾ ತಂಡಗಳ ಪ್ರದರ್ಶನ ಮೆರವಣಿಗೆಗೆ ಮೆರುಗು ನೀಡಲಿವೆ ಎಂದು ಮಹಾಳಿಂಗರಾಯ ಮಹಾರಾಜರು ಹೇಳಿದರು. ದೇಶದ ಸ್ವಾತಂತ್ರ್ಯಕ್ಕಾಗಿ ಪ್ರಾಣದ ಹಂಗು ತೊರೆದು ಹೋರಾಡಿದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣನನ್ನು ನಂದಗಡದಲ್ಲಿ ಗಲ್ಲಿಗೇರಿಸಲಾಗಿತ್ತು. ಆ ಪವಿತ್ರ ಸ್ಥಳಕ್ಕೆ ತೆರಳಿ ವಿಜಯಪುರದಲ್ಲಿ ರಾಯಣ್ಣನ ಬೃಹತ್ ಜಾತ್ರೆ ನಡೆಸುವ ಸಂಕಲ್ಪ ಮಾಡಲಾಗಿತ್ತು. ಇದೀಗ ರಾಯಣ್ಣ ಉತ್ಸವ ಸಮಿತಿ ಹಾಗೂ ಹಾಲುಮತ ಸಮಾಜದ ಸಹಕಾರದಿಂದ ಜಾತ್ರೆ ಆಯೋಜಿಸಲಾಗುತ್ತಿದೆ ಎಂದರು.

ರಾಯಣ್ಣನ ಜಯಂತಿ ಆಚರಣೆ ಹಲವು ಕಡೆಗಳಲ್ಲಿ ನಡೆ- ಯುತ್ತಿದ್ದರೂ, ವಿಜಯಪುರದಲ್ಲಿ ಇದೇ ಮೊದಲ ಬಾರಿಗೆ ಬೃಹತ್ ಜಾತ್ರೆಯ ರೂಪದಲ್ಲಿ ಕಾರ್ಯಕ್ರಮ ಆಯೋಜಿಸಲಾಗುತ್ತಿದೆ ಎಂದು ತಿಳಿಸಿದರು.

**ವಿಜಯಪುರದಲ್ಲಿ ಮೊದಲ ಬಾರಿಗೆ ಆಯೋಜನೆ;**
**12 ಅಡಿ ಎತ್ತರದ ರಾಯಣ್ಣನ ಮೂರ್ತಿಯ ಭವ್ಯ ಮೆರವಣಿಗೆ**



ಖ್ಯಾತ ವಾಗ್ಮಿ ಮೋಹನ ಮೇಟಿ ಮಾತನಾಡಿ, ಆ. 23ರಂದು ನಡೆಯಲಿರುವ ಐತಿಹಾಸಿಕ ಕಾರ್ಯಕ್ರಮಕ್ಕೆ ರಾಜ್ಯದ ವಿವಿಧ ಜಿಲ್ಲೆಗಳಿಂದ ರಾಯಣ್ಣನ ಅಭಿಮಾನಿಗಳು ಆಗಮಿಸಲಿದ್ದಾರೆ. ಜಾತ್ರೆಯು ಜಾತ್ಯತೀತ ಹಾಗೂ ರಾಜಕೀಯೇತರ ಕಾರ್ಯಕ್ರಮವಾಗಿ ಹೊರಹೊಮ್ಮಲಿದೆ ಎಂದರು.

ಕಾರ್ಯಕ್ರಮದಲ್ಲಿ ರಾಜ್ಯ ಮಹಿಳಾ ಆಯೋಗದ ಅಧ್ಯ- ಕ್ಷೆ ಡಾ. ನಾಗಲಕ್ಷ್ಮೀ ಚೌಧರಿ, ಇನ್‌ಸೈಟ್ ಸಂಸ್ಥೆಯ ಅಧ್ಯಕ್ಷ ವಿನಯಕುಮಾರ ಜಿ.ಬಿ., ಬಿಎಂಟಿಸಿ ಉಪಾಧ್ಯಕ್ಷ ನಿಕೇತರಾಜ್ ಮೌರ್ಯ, ಹಾಸನ ವಿಶ್ವವಿದ್ಯಾಲಯದ ಸಿಂಡಿಕೇಟ್ ಸದಸ್ಯ ಆನೇಕಲ್ ದೊಡ್ಡಯ್ಯ, ಜಿಪಂ ಮಾಜಿ ಸದಸ್ಯ ಕೆ.ಇ. ಕಾಂತೇಶ, ವಿನೋದ ಅಸೂಟಿ, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ರಾಜ್ಯಾಧ್ಯಕ್ಷ ಚಂದ್ರಶೇಖರ ನುಗ್ಗಲಿ, ರಶ್ಮಿ ರಾಜಶೇಖರ ಹಿಟ್ನಾಳ, ಜಿಪಂ ಮಾಜಿ ಸದಸ್ಯ ದಿಲೀಪ ಪಾಟೀಲ ಸೇರಿದಂತೆ ಸಮಾಜದ ವಿವಿಧ ಮುಖಂಡರು ಭಾಗವಹಿಸಲಿದ್ದಾರೆ ಎಂದು ಮೋಹನ ಮೇಟಿ ವಿವರಿಸಿದರು. ರಾಯಣ್ಣ ಉತ್ಸವ ಸಮಿತಿ ಅಧ್ಯಕ್ಷ ಪ್ರಕಾಶ ಜಾಲಗೇರಿ ಮಾತನಾಡಿದರು.

## ನಾಯಕರನ್ನು ಸೃಷ್ಟಿ ಮಾಡಿದ ದೂರ ದೃಷ್ಟಿಯ ಮಹಾನ್

# ನಾಯಕ ರಾಜೀವ್ ಗಾಂಧಿ: ಸಿಎಂ ಡಿಕೆಶಿ



ಶ್ರೀಪೆರಂಬದೂರು : "ರಾಜೀವ್ ಗಾಂಧಿ ಅವರು ದೇಶದಲ್ಲಿ ಅನೇಕ ನಾಯಕರನ್ನು ಸೃಷ್ಟಿ ಮಾಡಿದ, ದೂರದೃಷ್ಟಿ ಹೊಂದಿದ್ದ ಮಹಾನ್ ನಾಯಕರು. ಕರ್ನಾಟಕದ ಮುಖ್ಯಮಂತ್ರಿಯಾಗಿ ಅವರಿಗೆ ಗೌರವ ಸಲ್ಲಿಸುವುದು ನಮ್ಮ ಕರ್ತವ್ಯ" ಎಂದು ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು ತಿಳಿಸಿದರು.

ಶ್ರೀಪೆರಂಬದೂರಿನಲ್ಲಿ ರಾಜೀವ್ ಗಾಂಧಿಯವರ ಸ್ಮಾರಕಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಶಿವಕುಮಾರ್ ಅವರು ಮಾಧ್ಯಮಗಳಿಗೆ ಗುರುವಾರ ಪ್ರತಿಕ್ರಿಯೆ ನೀಡಿ- ದರು. "ಇಂದು ರಾಜೀವ್ ಗಾಂಧಿಯವರ ಜನ್ಮದಿನ. ಈ ಸ್ಮಾರಕದೊಂದಿಗೆ ನನಗೆ ಭಾವನಾತ್ಮಕ ಸಂಬಂಧವಿದೆ. 15 ವರ್ಷಗಳಿಂದ ಸತತವಾಗಿ ಇಲ್ಲಿಗೆ ಭೇಟಿ ನೀಡುತ್ತಿದ್ದೇನೆ. ಜಯಲಲಿತಾ ಅವರು ಮುಖ್ಯಮಂತ್ರಿಗಳಾಗಿದ್ದ ಸಂದರ್ಭದಲ್ಲಿ ಈ ಸ್ಥಳವನ್ನು ನಿರ್ಮಾಣ ಮಾಡುವ ಸಂದರ್ಭದಲ್ಲಿ ಇಲ್ಲಿ ಸೇವೆ ಸಲ್ಲಿಸುವ ಮಹತ್ತರ ಅವಕಾಶ ದೊರಕಿತ್ತು. ಸ್ಮಾರಕಕ್ಕೆ ನಿಲ್ಲಿಸಿರುವ ಗ್ರಾನೈಟ್ ನ ಏಕಶಿಲೆಯನ್ನು ಕನಕಪುರದ ನಮ್ಮ ಕ್ವಾರಿಯಿಂದ ತರಿಸಲಾಗಿದೆ" ಎಂದು ಸ್ಮರಿಸಿದರು. "ಶ್ರೀಪೆರಂಬದೂರು ರಾಜೀವ್ ಅವರು ದೇಶಕ್ಕಾಗಿ ಪ್ರಾಣ ತೆತ್ತ ಸ್ಥಳ. ದಕ್ಷಿಣ ಭಾರತ ಮುಖ್ಯಮಂತ್ರಿಗಳ ಸಭೆಯಲ್ಲಿ ಭಾಗವಹಿಸಲು ನಾನು ಆಗಮಿಸಿದ್ದು, ಈ ಅವಕಾಶವನ್ನು ಸದುಪಯೋಗಪಡಿಸಿಕೊಂಡು ಇಲ್ಲಿಗೆ ಭೇಟಿ ನೀಡಿದ್ದೇನೆ" ಎಂದರು. "ದೇಶದ ಯುವ ಜನತೆ ರಾಜೀವ್ ಗಾಂಧಿಯವರನ್ನು ಮರೆಯಲು ಸಾಧ್ಯವಿಲ್ಲ. ದೇಶದ ಯುವಜನತೆ ಮತ್ತು ವಿದ್ಯಾರ್ಥಿಗಳು ಪಂಚಾಯಿತಿಯಿಂದ ಹಿಡಿದು ಸಂಸತ್ತಿನವರೆಗೆ ತಮ್ಮ ಜನಪ್ರತಿನಿಧಿಯನ್ನು ಆಯ್ಕೆ ಮಾಡಲು ಮತದಾನದ ವಯಸ್ಸನ್ನು 18 ವರ್ಷಗಳಿಗೆ ಇಳಿಸಿದರು. ಅದು ರಾಜೀವ್ ಗಾಂಧಿಯವರಿಗೆ ಈ ದೇಶದ ಯುವ ಜನತೆಯ ಮೇಲಿದ್ದ ನಂಬಿಕೆ. ನಾವೆಲ್ಲಾ ಅವರ ವಿಚಾರಗಳಿಂದಲೇ ರೂಪುಗೊಂಡವರು. ಅವರ ಪರಂಪರೆಯನ್ನು ಮುಂದುವರೆಸಿಕೊಂಡು ಹೋಗಬೇಕಾಗಿರುವುದು ನಮ್ಮ ಕರ್ತವ್ಯ" ಎಂದರು.

"ಭಾರತ್ ಜೋಡೋ ಯಾತ್ರೆಗೂ ಮುನ್ನ ರಾಹುಲ್ ಗಾಂಧಿ ಯವರೊಂದಿಗೆ ಇಲ್ಲಿಗೆ ಭೇಟಿ ನೀಡಿದ್ದೆ. ಪ್ರತಿ ವರ್ಷ ಕರ್ನಾಟಕದಿಂದ ರಾಜೀವ್ ಜ್ಯೋತಿಯನ್ನು ಇಲ್ಲಿಗೆ ತಂದು ಅದನ್ನು ದೆಹಲಿಗೆ ಒಯ್ಯಲಾಗುತ್ತದೆ. ರಾಜೀವ್ ಗಾಂಧಿಯವರು ಜೀವಂತವಿಲ್ಲದಿದ್ದರೂ ಅವರ ಸಿದ್ಧಾಂತ ಹಾಗೂ ನಾಯಕತ್ವ ಜೀವಂತವಾಗಿವೆ" ಎಂದರು. ಗಾಂಧಿ ಕುಟುಂಬ ಅಧಿಕಾರದಲ್ಲಿ ಇರಲಿ ಇಲ್ಲದೇ ಇರಲಿ ಈ ದೇಶವನ್ನು ಮುನ್ನಡೆಸಿದ್ದಾರೆ. ಕಾಂಗ್ರೆಸ್ ಶಕ್ತಿ ದೇಶದ ಶಕ್ತಿ. ಕಾಂಗ್ರೆಸ್ ಇತಿಹಾಸ ದೇಶದ ಇತಿಹಾಸ. ಕಾಂಗ್ರೆಸ್ ನ ನಂಟು ಗಾಂಧಿ ಕುಟುಂಬಕ್ಕೆ ಸದಾ ಕಾಲವೂ ಇದೆ. ಈ ಕುಟುಂಬದ ದೇಶಕ್ಕೆ ನೀಡಿರುವ ಕೊಡುಗೆಗೆ ಸರಿಸಾಟಿ ಇಲ್ಲ. ಜವಾಹರ್ ಲಾಲ್ ನೆಹರೂ, ಇಂದಿರಾ ಗಾಂಧಿ, ರಾಜೀವ್ ಗಾಂಧಿ ಅವರು ದೇಶಕ್ಕಾಗಿ ತ್ಯಾಗ ಮಾಡಿದ್ದಾರೆ. ಕರ್ನಾಟಕ ರಾಜ್ಯದ ಪರವಾಗಿ ಹಾಗೂ ದೇಶದ ಕಾಂಗ್ರೆಸ್ಸಿಗನಾಗಿ ಈ ಸ್ಥಳಕ್ಕೆ ಭೇಟಿ ನೀಡುವುದು ನನ್ನ ಕರ್ತವ್ಯ" ಎಂದರು.

ತಮಿಳುನಾಡು ಮುಖ್ಯಮಂತ್ರಿ ವಿಜಯ್ ಅವರನ್ನು ಪ್ರಧಾನಿ ಅಭ್ಯರ್ಥಿಯಾಗಿ ಬಿಂಬಿಸುತ್ತಿರುವ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗೆ ಉತ್ತರಿಸಿದ ಮುಖ್ಯಮಂತ್ರಿಗಳು "ನಾಯಕರು ರಾಜಕೀಯ ಹೇಳಿಕೆಗಳನ್ನು ನೀಡುವ ಬದಲು ದೇಶ ಕಟ್ಟುವ ಕಡೆಗೆ ಗಮನಹರಿಸಬೇಕು. ದಕ್ಷಿಣ ರಾಜ್ಯಗಳ ಮುಖ್ಯಮಂತ್ರಿಗಳ ಸಮ್ಮೇಳನದಲ್ಲಿ ತಾವು ಕ್ಷೇತ್ರ ಮರುವಿಂಗಡಣೆಯ (ಡಿಲಿಮಿಟೇಶನ್) ವಿಷಯವನ್ನು ಪ್ರಸ್ತಾಪಿಸಿದ್ದೇವೆ. ಮುಂಬರುವ ಕ್ಷೇತ್ರ ವಿಂಗಡಣೆ ಪ್ರಕ್ರಿಯೆಯನ್ನು ಇತ್ತೀಚಿನ ಜನಸಂಖ್ಯಾ ಅಂಕಿಅಂಶಗಳ ಆಧಾರದ ಬದಲಿಗೆ 1971 ರ ಜನಗಣತಿಯ ಆಧಾರದ ಮೇಲೆ ನಡೆಸಬೇಕು ಎಂಬುದು ದಕ್ಷಿಣ ಭಾರತದ ಎಲ್ಲಾ ರಾಜ್ಯಗಳ ಒಗ್ಗಟ್ಟಿನ ಬೇಡಿಕೆ- ಯಾಗಿದೆ. ರಾಜಕಾರಣಿಗಳು ಮುಂಚಿತವಾಗಿಯೇ ದೊಡ್ಡ ಮಟ್ಟದ ರಾಜಕೀಯ ಚರ್ಚೆಗಳಲ್ಲಿ ತೊಡಗುವುದನ್ನು ಬಿಟ್ಟು, ರಾಷ್ಟ್ರ ನಿರ್ಮಾಣದ ಮೂಲಭೂತ ಕೆಲಸಗಳಿಗೆ ಆದ್ಯತೆ ನೀಡಬೇಕು" ಎಂದು ತಿಳಿಸಿದರು.

ಒಂದನೇ ಪುಟದಿಂದ..

# ಅನ್ನಭಾಗ್ಯ ಅಕ್ಕಿ ಅಕ್ರಮ ಅಡ್ಡೆ ಮೇಲೆ ದಾಳಿ

ನ್ಯಾಯಬೆಲೆ ಅಂಗಡಿಯಿಂದ ಅನ್ನಭಾಗ್ಯ ಯೋಜನೆಯಡಿ ಪಡೆದ ಅಕ್ಕಿ ಅಥವಾ ರಾಗಿಯನ್ನು ಮರುಮಾರಾಟ ಮಾಡುವುದು ನಿಯಮ ಉಲ್ಲಂಘನೆಯಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಅನ್ನಭಾಗ್ಯ ಯೋಜನೆಯ ಆಹಾರಧಾನ್ಯವನ್ನು ಕುಟುಂಬದ ಬಳಕೆಗಾಗಿ ಮಾತ್ರ ಬಳಸಿಕೊಳ್ಳಬೇಕು. ಬಿಪಿಎಲ್ ಕಾರ್ಡ್‌ದಾರರು ಆಹಾರಧಾನ್ಯವನ್ನು ಮಾರಾಟ ಮಾಡಿರುವುದು ಸಾಬೀತಾದರೆ, ಸಂಬಂಧಪಟ್ಟ ಕಾರ್ಡ್‌ಗಳನ್ನು ಆರು ತಿಂಗಳ ಕಾಲ ಅಮಾನತುಗೊಳಿಸುವ ಕ್ರಮ ಕೈಗೊಳ್ಳಲಾಗುವುದು ಎಂದು ಸವಿತಾ ತಿಳಿಸಿದ್ದಾರೆ.

ಕೆ.ಪಿ. ಅಗ್ರಹಾರದಲ್ಲಿ ಅಕ್ಕಿ ಮತ್ತು ರಾಗಿ ಮಾರಾಟ ಮಾಡಿರುವ ಬಿಪಿಎಲ್ ಕುಟುಂಬಗಳ ಮಾಹಿತಿ ಸೇರಿದಂತೆ, ಅಕ್ರಮ ಜಾಲದ ಕುರಿತು ಆಹಾರ ಇಲಾಖೆ ಅಧಿಕಾರಿಗಳು ಹೆಚ್ಚಿನ ಮಾಹಿತಿ ಕಲೆಹಾಕುತ್ತಿದ್ದಾರೆ. ಅನ್ನಭಾಗ್ಯ ಯೋಜನೆಯಡಿ ಉಚಿತವಾಗಿ ದೊರೆಯುವ ಆಹಾರಧಾನ್ಯವನ್ನು ಹಣಕ್ಕಾಗಿ ಮರುಮಾರಾಟ ಮಾಡಲಾಗುತ್ತಿದೆಯೇ ಎಂಬುದರ ಕುರಿತು ತನಿಖೆ ಮುಂದುವರಿದಿದೆ.

# ಹಗರಣದ ಭಯ ಡಿಕೆಶಿಗೆ ಕಾಡುತ್ತಿದೆ: ಶ್ರೀರಾಮುಲು ಆರೋಪ

ಹೇಳಿದರು.

ಪ್ರಕರಣವನ್ನು ಮುಚ್ಚಿಹಾಕಲು ದಲಿತ ಕಾರ್ಡ್ ಬಳಸಲಾಗುತ್ತಿದೆ ಎಂದು ಆರೋಪಿಸಿದ ಅವರು, ನೈತಿಕ ಹೊಣೆ ಹೊತ್ತು ಸಚಿವರು ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದರು. ದಲಿತರ ಹಣಕ್ಕೆ ಸಂಬಂಧಿಸಿದ ಪ್ರಕರಣವಾಗಿರುವುದರಿಂದ ಸರ್ಕಾರ ಈ ವಿಚಾರವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಬೇಕು ಎಂದರು.

ಸರ್ಕಾರದ ಹಣದ ದುರ್ಬಳಕೆಯ ಆರೋಪಗಳು ಕೇಳಿಬಂದಿರುವ ಹಿನ್ನೆಲೆಯಲ್ಲಿ ಪ್ರಕರಣದ ತನಿಖೆಯನ್ನು ಯಾವುದೇ ರಾಜಕೀಯ ಒತ್ತಡವಿಲ್ಲದೆ ನಡೆಸಬೇಕು. ಹಣದ ವರ್ಗಾವಣೆ, ಅದರ ಫಲಾನುಭವಿಗಳು ಹಾಗೂ ಪ್ರಕರಣದ ಹಿಂದೆ ಇರುವ ವ್ಯಕ್ತಿಗಳ ಕುರಿತು ಸಂಪೂರ್ಣ ಮಾಹಿತಿ ಬಹಿರಂಗವಾಗಬೇಕು ಎಂದು ಶ್ರೀರಾಮುಲು ಒತ್ತಾಯಿಸಿದರು.

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹಾಗೂ ಡಿ.ಕೆ. ಶಿವಕುಮಾರ್ ಅವರು ಬೇರೆ ಬೇರೆ ಪ್ರಕರಣಗಳಲ್ಲಿ ಜಾಮೀನಿನ ಮೇಲೆ ಹೊರಗಿದ್ದರೂ, ಸರ್ಕಾರದ ಹಣವನ್ನು ದುರ್ಬಳಕೆ ಮಾಡಿಕೊಂಡಿರುವ ಉದಾಹರಣೆ ಇಲ್ಲ ಎಂದು ಅವರು ಹೇಳಿದರು.

ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಅವರು 'ವಂದೇ ಮಾತರಂ' ಗೀತೆ ಹಾಡುವುದಿಲ್ಲ ಎಂಬ ಹೇಳಿಕೆಗೆ ಪ್ರತಿಕ್ರಿಯಿಸಿದ ಶ್ರೀರಾಮುಲು, ದೇಶದ ಬಗ್ಗೆ ನಿಷ್ಠೆ ಇರುವವರು ರಾಷ್ಟ್ರಭಕ್ತಿಯ ಸಂಕೇತವಾದ 'ವಂದೇ ಮಾತರಂ' ಗೀತೆಗೆ ಗೌರವ ನೀಡಬೇಕು ಎಂದು ಹೇಳಿದರು.

ಕಾಂಗ್ರೆಸ್‌ನ ಹಿರಿಯ ನಾಯಕರ ಹೇಳಿಕೆಗಳು ಹಾಗೂ ಪಕ್ಷದ ಹಿಂದಿನ ನಿಲುವುಗಳ ಕುರಿತು ಪ್ರಶ್ನಿಸಿದ ಅವರು, ದೇಶದ ವಿಚಾರದಲ್ಲಿ ರಾಜಕೀಯಕ್ಕಿಂತ ರಾಷ್ಟ್ರದ ಹಿತವೇ ಮುಖ್ಯವಾಗಬೇಕು ಎಂದರು.

ವಾಲ್ಮೀಕಿ ನಿಗಮದ ಹಣದ ಅಕ್ರಮ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರ ಸಂಪೂರ್ಣ ಸತ್ಯವನ್ನು ಜನರ ಮುಂದೆ ಇಡಬೇಕು. ಪ್ರಕರಣದಲ್ಲಿ ಯಾರೇ ಭಾಗಿಯಾಗಿದ್ದರೂ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಶ್ರೀರಾಮುಲು ಆಗ್ರಹಿಸಿದರು.

## ಕರ್ನಾಟಕದ 440 ಪ್ರಥಮ ದರ್ಜೆ ಕಾಲೇಜುಗಳ ಪೈಕಿ

# 428ಕ್ಕೆ ಪ್ರಾಂಶುಪಾಲರೇ ಇಲ್ಲ!

2026–27ನೇ ಸಾಲಿನ ಬಜೆಟ್‌ನಲ್ಲಿ ಘೋಷಿಸಲಾಗಿರುವ ಎಂಟು ಹೊಸ ಸರ್ಕಾರಿ ಪ್ರಥಮ ದರ್ಜೆ/ವಸತಿ ಪದವಿ ಕಾಲೇಜುಗಳನ್ನು ಸ್ಥಾಪಿಸಲು ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ರಾಯರೆಡ್ಡಿ ತಿಳಿಸಿದರು.

ದಾವಣಗೆರೆಯಲ್ಲಿ ಹೊಸ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಸ್ಥಾಪಿಸುವ ಪ್ರಸ್ತಾವನೆಯನ್ನು ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

ಹೊಸ ಕಾಲೇಜುಗಳ ಸ್ಥಾಪನೆಗೆ ಸಂಬಂಧಿಸಿದ ಪ್ರಸ್ತಾವನೆಗಳನ್ನು ಪರಿಶೀಲಿಸಲು ರಚಿಸಲಾಗಿರುವ ಐವರು ಸದಸ್ಯರ ಸಮಿತಿಯನ್ನು ಪುನರ್‌ರಚಿಸುವ ಬಗ್ಗೆಯೂ ಸರ್ಕಾರ ಪರಿಶೀಲನೆ ನಡೆಸುತ್ತಿದೆ ಎಂದು ಸಚಿವರು ತಿಳಿಸಿದರು.

# ಹಣಕ್ಕಾಗಿ ಪ್ರಾಂಶುಪಾಲರನ್ನ ಕೊಂದ ವಿದ್ಯಾರ್ಥಿಗಳು

ಹೈದರಾಬಾದ್‌ನಲ್ಲಿದ್ದ ಆಕೆಯ ಪತಿ ತನ್ನ ಫೋನ್ ಕರೆಗಳಿಗೆ ಪ್ರತಿಕ್ರಿಯಿಸುತ್ತಿಲ್ಲ ಎಂದು ನೆರೆಹೊರೆಯವರಿಗೆ ತಿಳಿಸಿದಾಗ ಆಕೆಯ ಶವ ಪತ್ತೆಯಾಗಿದೆ. ನೆರೆಹೊರೆಯವರು ಪೊಲೀಸರಿಗೆ ಮಾಹಿತಿ ನೀಡಿದಾಗ, ಪ್ರಾಂಶುಪಾಲರ ಕೊಲೆಯಾಗಿರುವ ಪ್ರಕರಣ ಬೆಳಕಿಗೆ ಬಂದಿತ್ತು. ಕೊಲೆಗಾರರ ಪತ್ತೆಗೆ ಪೊಲೀಸರು ಐದು ತಂಡಗಳನ್ನು ರಚಿಸಿ ಸಿಸಿಟಿವಿ ದೃಶ್ಯಾವಳಿಗಳು, ವಿಧಿವಿಜ್ಞಾನ ಸಾಕ್ಷ್ಯಗಳು, ಬೆರಳಚ್ಚುಗಳು, ತಾಂತ್ರಿಕ ದತ್ತಾಂಶಗಳು ಮತ್ತು ಶಂಕಿತರ ಚಲನವಲನಗಳನ್ನು ಪರಿಶೀಲಿಸಿದರು ಮತ್ತು 80 ಕ್ಕೂ ಹೆಚ್ಚು ಜನರನ್ನು ಪ್ರಶ್ನಿಸಿದರು. ಕೊಲೆಯಾದ ರೂಪಾ ರೆಡ್ಡಿ ತನ್ನ ಚಿಕ್ಕಮನೊಂದಿಗೆ ಮಾತನಾಡುವ ಸಮಯದಲ್ಲಿ ಬಾಬು ಪದವನ್ನು ಬಳಸಿದ್ದಾರೆ ಎಂದು ಕಂಡು- ಕೊಂಡಾಗ ತನಿಖಾಧಿಕಾರಿಗಳಿಗೆ ಸುಳಿವು ಸಿಕ್ಕಿತು, ಫೋನ್ ಸ್ವಿಚ್ ಆಫ್ ಆಗುವ ಮೊದಲು.ಆಕೆಯ ಸಂಭಾಷಣೆಯಲ್ಲಿ ದಾಖಲಾದ ಕೊನೆಯ ಪದ ಬಾಬು. ಆಕೆ ಯಾರನ್ನು ಉಲ್ಲೇಖಿಸುತ್ತಿರಬಹುದು ಎಂದು ನಾವು ತನಿಖೆ ನಡೆಸಿದ್ದೇವೆ ಮತ್ತು ಇದು ನಮ್ಮನ್ನು ಶಾಲಾ ವಿದ್ಯಾರ್ಥಿಗಳ ಕಡೆಗೆ ಕರೆದೊಯ್ಯಿತು ಎಂದು ಹಿರಿಯ ಪೊಲೀಸ್ ಅಧಿಕಾರಿ ಶರತ್ ಚಂದ್ರ ಪವಾರ್ ಸುದ್ದಿಗಾರರಿಗೆ ತಿಳಿಸಿದರು. ನಂತರ ತನಿಖಾಧಿಕಾರಿಗಳು ವಿದ್ಯಾರ್ಥಿಗಳನ್ನು ಪ್ರತ್ಯೇಕವಾಗಿ ಪ್ರಶ್ನಿಸಿದರು ಮತ್ತು ಶಾಲೆಗೆ ಗೈರುಹಾಜರಾದ ಐದು 10 ನೇ ತರಗತಿಯ ವಿದ್ಯಾರ್ಥಿಗಳನ್ನು ಗಮನಿಸಿದರು. ಅವರಲ್ಲಿ ಇಬ್ಬರು ಕಳೆದ ಕೆಲವು ದಿನಗಳಲ್ಲಿ ಬಹಳಷ್ಟು ಹಣವನ್ನು ಖರ್ಚು ಮಾಡುತ್ತಿದ್ದರು ಮತ್ತು ಪಾರ್ಟಿಗಳನ್ನು ನಡೆಸುತ್ತಿದ್ದರು ಎಂದು ಅವರಿಗೆ ತಿಳಿದುಬಂದಿದೆ.ನಿನ್ನೆ ಬೆಳಿಗ್ಗೆ ಇಬ್ಬರು ವಿದ್ಯಾರ್ಥಿಗಳನ್ನು ಬಂಧಿಸಲಾಯಿತು ಮತ್ತು ವಿಚಾರಣೆಯ ಸಮಯದಲ್ಲಿ, ಅವರು ಯೋಜನೆಯ ಪ್ರಕಾರ ರೂಪಾ ರೆಡ್ಡಿಯನ್ನು ಕೊಲೆ ಮಾಡಿರುವುದಾಗಿ ಒಪ್ಪಿಕೊಂಡರು ಎಂದು ಪವಾರ್ ಹೇಳಿದರು.

ಆರೋಪಿಗಳ ಹಾಸ್ಟೆಲ್ ಬ್ಯಾಗ್‌ಗಳಲ್ಲಿ ನಗದು ಮತ್ತು ಮೊಬೈಲ್ ಫೋನ್ ಪತ್ತೆಯಾದ ನಂತರ ರೂಪಾ ರೆಡ್ಡಿ ಈ ಹಿಂದೆ ಆರೋಪಿಗಳಿಗೆ ಛೀಮಾರಿ ಹಾಕಿದ್ದರು ಎಂದು ಅಧಿಕಾರಿ ಹೇಳಿದರು.ಅವರು ತಮ್ಮ ಪೋಷಕರಿಗೆ ಮಾಹಿತಿ ನೀಡಿದರು ಮತ್ತು ಅವರನ್ನು ಹಾಸ್ಟೆಲ್‌ನಿಂದ ಡೇ-ಸ್ಕಾಲರ್ ಸ್ಥಾನಮಾನಕ್ಕೆ ವರ್ಗಾಯಿಸಲಾಯಿತು.ಪ್ರಾಂಶುಪಾಲರ ವಿರುದ್ಧದ ಅಸಮಾಧಾನಕ್ಕೆ ಇದು ಕಾರಣವಾಗಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ. ಆರೋಪಿಗಳು ಐದು ದಿನಗಳ ಕಾಲ ಕಳ್ಳತನವನ್ನು ಯೋಜಿಸಿ ಆಕೆಯ ಮನೆಗೆ ತಪಾಸಣೆ ನಡೆಸಿದರು. ಅವರು ಒಂದು ಚಾಕುವನ್ನು ಖರೀದಿಸಿದರು ಮತ್ತು ತಮ್ಮ ಗುರುತನ್ನು ಮರೆಮಾಡಲು ಕೈಗವಸುಗಳನ್ನು ಸಹ ಖರೀದಿಸಿದರು, ಇದರಿಂದಾಗಿ ತನಿಖಾಧಿಕಾರಿಗಳಿಗೆ ಆರಂಭದಲ್ಲಿ ಸೀಮಿತ ಭೌತಿಕ ಪುರಾವೆಗಳು ದೊರೆತವು. ಕೊಲೆಯಾದ ದಿನ, ವಿದ್ಯಾರ್ಥಿಗಳಲ್ಲಿ ಒಬ್ಬ ಮಂಕಿ ಕ್ಯಾಪ್ ಮತ್ತು ಕೈಗವಸುಗಳನ್ನು ಧರಿಸಿ ಮನೆಗೆ ಪ್ರವೇಶಿಸಿದನು. ಮಲಗುವ ಕೋಣೆಯಲ್ಲಿ ಇರಿಸಲಾಗಿದ್ದ 2.50 ಲಕ್ಷ ರೂ.ಗಳನ್ನು ಅವನು ಕಂಡುಕೊಂಡು ಪರಾರಿಯಾಗಲು ಪ್ರಾರಂಭಿಸಿದನು. ಆದಾಗ್ಯೂ, ಮಂಕಿ ಕ್ಯಾಪ್ ಜಾರಿತು, ಮತ್ತು ರೂಪಾ ರೆಡ್ಡಿ ಅವನನ್ನು ಗುರುತಿಸಿದನು. ಅವಳು ತಮ್ಮನ್ನು ಗುರುತಿಸುತ್ತಾಳೆ ಎಂಬ ಭಯದಿಂದ, ಅವನು ಅವಳನ್ನು ಚಾಕುವಿನಿಂದ 27 ಬಾರಿ ಇರಿದನು. ಕೊಲೆಯ ನಂತರ, ಆರೋಪಿಗಳು ಹಣವನ್ನು ತೆಗೆದು- ಕೊಂಡು ರಕ್ತಸಿಕ್ತ ಬಟ್ಟೆ ಮತ್ತು ಮಂಕಿ ಕ್ಯಾಪ್ ಅನ್ನು ಹೂತುಹಾಕುವ ಮೂಲಕ ಸಾಕ್ಷ್ಯವನ್ನು ಮರೆಮಾಡಲು ಪ್ರಯತ್ನಿಸಿದರು.

# ವರಮಹಾಲಕ್ಷ್ಮಿ ಹಬ್ಬದ ವಿಶೇಷತೆ

ಪರಿಸ್ಥಿತಿಯಲ್ಲಿ ನದೀತೀರದಲ್ಲಿ ಮಾಡುವುದು ಅಸಾಧ್ಯವೆಂದು ತಿಳಿದು, 'ಯನ್ಮೂಲೇ ಸರ್ವತೀರ್ಥಾನಿ, ಯನ್ಮಧ್ಯೇ ಸರ್ವದೇವತಾ' ಎಂಬಂತೆ ಸಕಲ ತೀರ್ಥಗಳ ಸನ್ನಿಧಾನವುಳ್ಳ ತುಳಸಿ ಬೃಂದಾವನದ ಸಮೀಪ ಯಮುನಾ ಕಲಶವನ್ನು ಸ್ಥಾಪಿಸಿ, ಗಂಗಾ, ಯಮುನಾ, ಗೋದಾವರಿ ಮೊದಲಾದ ನದಿ ದೇವತೆಗಳನ್ನು ಆವಾಹಿಸಿ ಷೋಡಶೋಪಚಾರ ಪೂಜೆಯನ್ನು ಮಾಡಬೇಕು.

ನಂತರ ಪೀಠಪೂಜೆ ಮಾಡಿ ಅದರಲ್ಲಿ ಲಕ್ಷ್ಮೀನಾರಾಯಣರನ್ನು ಪ್ರತಿಷ್ಠಾಪಿಸಬೇಕು. ನಂತರ ನವದಾರ ಸ್ಥಾಪನೆ ಮಾಡಬೇಕು. ದಾರದಲ್ಲಿ 9 ಅಥವಾ 12 ಗ್ರಂಥಿಗಳನ್ನು ಮಾಡಿ, ಆ ಗ್ರಂಥಿಗಳಲ್ಲಿ ಲಕ್ಷ್ಮೀನಾರಾಯಣರ ನಾಮದಿಂದ ಪೂಜಿಸಬೇಕು.

ನಂತರ ಷೋಡಶೋಪಚಾರ ಪೂಜೆಯನ್ನು ಮಾಡಿ, ಪರಿಮಳ ಪತ್ರಪುಷ್ಪಗಳಿಂದ ಅರ್ಚನೆಯನ್ನು ಮಾಡಿ, ಕಲಶಕ್ಕೆ ಅರಿಶಿಣ, ಕುಂಕುಮ, ಅಕ್ಷತೆಗಳಿಂದ ಪೂಜಿಸಿ, ಸೌಭಾಗ್ಯದ್ರವ್ಯಗಳನ್ನು ಅರ್ಪಿಸಿ, ಕುಂಕುಮಾರ್ಚನೆಯನ್ನು ಮಾಡಿ, ಧೂಪ, ದೀಪ ಮಾಡಿ ಯಥಾಶಕ್ತಿ ಪಂಚಭಕ್ಷ್ಯಗಳನ್ನು ನಿವೇದಿಸಬೇಕು.

ನಂತರ ಮಂಗಳಾರತಿಯನ್ನು ಮಾಡಿ ಪ್ರದಕ್ಷಿಣೆ, ನಮಸ್ಕಾರಗಳನ್ನು ಮಾಡಬೇಕು. ಹಾಡುಗಳನ್ನು ಹೇಳಿ ಆರತಿ ಮಾಡಬೇಕು. ನಂತರ ಒಂದು ದಾರವನ್ನು ಲಕ್ಷ್ಮೀದೇವಿಗೆ ಸಮರ್ಪಿಸಿ ಮುತ್ತೈದೆಯರೆಲ್ಲ ದಾರವನ್ನು ಕಟ್ಟಿಕೊಳ್ಳಬೇಕು. ವಾಯನದಾನ ಮತ್ತು ಮರದ ಬಾಗಿನವನ್ನು ಕೊಟ್ಟು ವ್ರತ ಸಮರ್ಪಣೆಯನ್ನು ಮಾಡಬೇಕು. ಈ ವ್ರತವೂ ಸ್ತ್ರೀಯರ ಸೌಭಾಗ್ಯಕ್ಕೆ ಮೂಲವಾದ್ದರಿಂದ ಪ್ರತಿಯೊಬ್ಬ ಮುತ್ತೈದೆಯರೂ ಆಚರಿಸಲೇಬೇಕು.

# ಶಿಕ್ಷಣ ಕ್ಷೇತ್ರದ ಸಾಧಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭ

ಬೆಂಗಳೂರು: ಶಿಕ್ಷಕರ ದಿನಾಚರಣೆಯ ಅಂಗವಾಗಿ ಚೇತನ ಫೌಂಡೇಶನ್ ವತಿಯಿಂದ ವಿವಿಧ ಕ್ಷೇತ್ರಗಳಲ್ಲಿ ಶೈಕ್ಷಣಿಕ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಗೌರವಿಸುವ ಉದ್ದೇಶದಿಂದ **"Education Excellence National Awards 2026"** ಪ್ರಶಸ್ತಿ ಪ್ರದಾನ ಸಮಾರಂಭವನ್ನು ಆಯೋಜಿಸಲಾಗಿದೆ.

ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಸೇವೆ ಸಲ್ಲಿಸಿರುವ ಶಿಕ್ಷಕರು, ಮುಖ್ಯ ಶಿಕ್ಷಕರು, ಉಪನ್ಯಾಸಕರು, ಪ್ರಾಧ್ಯಾಪಕರು, ಪ್ರಾಂಶುಪಾಲರು, ಶಿಕ್ಷಣ ಸಂಸ್ಥೆಗಳ ಸ್ಥಾಪಕರು, ಅಧ್ಯಕ್ಷರು ಹಾಗೂ ಟ್ಯುಟೋರಿಯಲ್ ಸಂಸ್ಥೆಗಳ ನಿರ್ವಹಣಾಧಿಕಾರಿಗಳನ್ನು ಪ್ರಶಸ್ತಿಗೆ ಪರಿಗಣಿಸಲಾಗುತ್ತದೆ. ಭಾರತದ ಮಾಜಿ ರಾಷ್ಟ್ರಪತಿ ಹಾಗೂ ಖ್ಯಾತ ತತ್ವಜ್ಞಾನಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಆದರ್ಶ ಮತ್ತು ಶಿಕ್ಷಣ ಸೇವೆಯನ್ನು ಸ್ಮರಿಸುವ ಹಿನ್ನೆಲೆಯಲ್ಲಿ ಈ ಪ್ರಶಸ್ತಿಯನ್ನು ನೀಡಲಾಗುತ್ತಿದೆ. ಪ್ರಶಸ್ತಿ ಪ್ರದಾನ ಸಮಾರಂಭವು 2026ರ ಸೆಪ್ಟೆಂಬರ್ 6ರಂದು, ಭಾನುವಾರ, ಬೆಂಗಳೂರಿನಲ್ಲಿ ನಡೆಯಲಿದೆ. ಪ್ರಶಸ್ತಿಗೆ ನಾಮನಿರ್ದೇಶನಗಳು ಆರಂಭವಾಗಿದ್ದು, ಅರ್ಹ ಸಾಧಕರು ತಮ್ಮ ನಾಮನಿರ್ದೇಶನವನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ವಾಟ್ಸ್‌ಆಪ್: +91 99868 21096 ಸಂಪರ್ಕಿಸಬಹುದು.

## ಬಿ.ಎ ಪದವಿಯಲ್ಲಿ ಗೌತಮಿ ಬಡಿಗೇರ್ 6ನೇ ರ್‍ಯಾಂಕ್



ಬಳ್ಳಾರಿ : ಜಿಲ್ಲೆಯ ಕುರುಗೋಡು ಪಟ್ಟಣದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಗೌತಮಿ ಬಡಿಗೇರ್ ಬಿ.ಎ. ಪದವಿಯಲ್ಲಿ ಶೇ. 88.11% ಅಂಕ ಗಳಿಸಿ ವಿಶ್ವವಿದ್ಯಾಲಯ ಮಟ್ಟದಲ್ಲಿ 6ನೇ ರ್‍ಯಾಂಕ್ ಪಡೆಯುವ ಮೂಲಕ ಕಾಲೇಜಿಗೆ ಕೀರ್ತಿ ತಂದಿದ್ದಾರೆ ಎಂದು ಕಾಲೇಜಿನ ಪ್ರಾಂಶುಪಾಲರಾದ ಡಾ. ಶಾಂತಲಾ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಂಲಗ್ನತೆ ಹೊಂದಿರುವ ಕಾಲೇಜಿನಲ್ಲಿ 2022–23 ನೇ ಶೈಕ್ಷಣಿಕ ಸಾಲಿನಿಂದ 2024–25ನೇ ಸಾಲಿನ ವಾರ್ಷಿಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಲ್ಲಿ ಒಟ್ಟು 4600 ಅಂಕಗಳಿಗೆ 4053 ಅಂಕಗಳನ್ನು ಪಡೆಯುವ ಮೂಲಕ (ಶೇ. 88.11%) ಬಿ.ಎ. ವಿಭಾಗದಲ್ಲಿ ವಿಶ್ವವಿದ್ಯಾಲಯಕ್ಕೆ 6ನೇ ರ್‍ಯಾಂಕ್ ಪಡೆದುಕೊಂಡಿದ್ದಾಳೆ. ವಿದ್ಯಾರ್ಥಿಯ ಸಾಧನೆ ಸಂತಸ ನೀಡಿದ್ದು, ಅವರ ಮುಂದಿನ ಶೈಕ್ಷಣಿಕ ಜೀವನ ಪ್ರಗತಿಪಥದಲ್ಲಿ ಸಾಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿ ಗೌತಮಿ ಬಡಿಗಾರ್ ಸಾಧನೆಗೆ ಕಾಲೇಜು ಅಭಿವೃದ್ಧಿ ಮಂಡಳಿಯ ಅಧ್ಯಕ್ಷರು ಹಾಗೂ ಕ್ಷೇತ್ರದ ಶಾಸಕ ಜೆ.ಎನ್. ಗಣೇಶ್ ಮತ್ತು ಸದಸ್ಯರು, ಬೋಧಕ, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಅಭಿನಂಧಿಸಿ ಶುಭ ಹಾರೈಸಿದ್ದಾರೆ.

## ಎನ್. ವೀರಭದ್ರಪ್ಪ ನಾಯಕ ಬಿಜೆಪಿ ಎಸ್. ಟಿ ಮೋರ್ಚಾ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರಾಗಿ ನೇಮಕ



ಬಳ್ಳಾರಿ : ಭಾರತೀಯ ಜನತಾ ಪಕ್ಷದ ಎಸ್. ಟಿ ಮೋರ್ಚಾ ಬಳ್ಳಾರಿ ಜಿಲ್ಲಾ ಕಾರ್ಯಕಾರಿ ಸಮಿತಿಯ ಸದಸ್ಯರನ್ನಾಗಿ ದರೂರು ಗ್ರಾಮದ ಎನ್. ವೀರಭದ್ರಪ್ಪ ನಾಯಕ ಅವರನ್ನು ನೇಮಕ ಮಾಡಲಾಗಿದೆ.

ಬಿಜೆಪಿ ಎಸ್ಟಿ ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರು ಹನುಮಂತು ಅವರ ಆದೇಶದ ಮೇರೆಗೆ, ಜಿಲ್ಲಾ ಅಧ್ಯಕ್ಷ ಧರಪ್ಪ ನಾಯಕ ಅವರು ನೇಮಕಾತಿ ಆದೇಶದ ಪ್ರತಿಯನ್ನು ನಗರದ ಬಿಜೆಪಿ ಕಚೇರಿಯಲ್ಲಿ ವಿತರಿಸಿದರು. ಈ ಸಂದರ್ಭದಲ್ಲಿ ಬಿಜೆಪಿ ಬಳ್ಳಾರಿ ಜಿಲ್ಲಾಧ್ಯಕ್ಷ ಅನಿಲ್ ಕುಮಾರ್ ಮೋಕಾ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## 'ನಶಾಮುಕ್ತ ಭಾರತ' ಅಭಿಯಾನದಡಿ ಪ್ರತಿಜ್ಞೆ ಸ್ವೀಕಾರ

ಬಳ್ಳಾರಿ: ಕೇಂದ್ರ ಸರ್ಕಾರದ 'ನಶಾಮುಕ್ತ ಭಾರತ ಅಭಿಯಾನ'ದಡಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸೇರಿದಂತೆ ವಿವಿಧ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ 6ನೇ ಮಾದಕ ದ್ರವ್ಯ ಸೇವನೆ ವಿರೋಧಿ ದಿನ ಆಚರಿಸಲಾಯಿತು.

ಈ ಜಾಗೃತಿ ಅಭಿಯಾನದ ಭಾಗವಾಗಿ ನಗರದ ವಿವಿಧ ಕಾಲೇಜು ಹಾಗೂ ಪ್ರೌಢಶಾಲೆಗಳಲ್ಲಿ ಮಾದಕ ದ್ರವ್ಯ ಸೇವನೆಯ ದುಷ್ಪರಿಣಾಮಗಳ ಕುರಿತು ಯುವಜನರಲ್ಲಿ ಜಾಗೃತಿ ಮೂಡಿಸಿ, ಸಾಮೂಹಿಕ ಪ್ರತಿಜ್ಞಾವಿಧಿ ಬೋಧಿಸಲಾಯಿತು.

## ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣ ವಿರುದ್ಧದ ಪ್ರತಿಭಟನೆಯಲ್ಲಿ ಟಿ ಹೆಚ್ ಸುರೇಶ್ ಬಾಬು ಭಾಗಿ




ಬಳ್ಳಾರಿ : ವಾಲ್ಮೀಕಿ ಪರಿಶಿಷ್ಟ ಪಂಗಡ ಅಭಿವೃದ್ಧಿ ನಿಗಮದ 187 ಕೋಟಿ ಹಗರಣದ ವಿರುದ್ಧ ಭಾರತೀಯ ಜನತಾ ಪಕ್ಷದ ವತಿಯಿಂದ ಹಮ್ಮಿಕೊಳ್ಳಲಾಗಿರುವ ಅಹೋರಾತ್ರಿ ಧರಣಿ ಇಂದಿಗೆ ಮೂರು ದಿನಗಳಾಗಿ ಮುಂದುವರೆಯುತ್ತಿದೆ. ಈ ಪ್ರತಿಭಟನಾ ಅಹೋರಾತ್ರಿ ಧರಣಿಗೆ ಕಂಪ್ಲಿ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ಹಾಗೂ ಕ್ಷೇತ್ರದ ಜನಪ್ರಿಯ ನಾಯಕ ಟಿ.ಹೆಚ್. ಸುರೇಶ್ ಬಾಬು ಇಂದು ಭಾಗವಹಿಸಿ ಹೋರಾಟಕ್ಕೆ ಬೆಂಬಲವನ್ನು ಸೂಚಿಸಿದರು.ಈ ಸಂದರ್ಭದಲ್ಲಿ ಮಾತನಾಡಿದ ಸುರೇಶ್ ಬಾಬು, ಪರಿಶಿಷ್ಟ ಪಂಗಡದ ಬಡ ಜನರ ಶೈಕ್ಷಣಿಕ ಆರ್ಥಿಕ ಔದ್ಯೋಗಿಕ ಮತ್ತು ಸಾಮಾಜಿಕ ಅಭಿವೃದ್ಧಿಗಾಗಿ ಮೀಸಲಾದ ಹಣವನ್ನು ಅನ್ಯ ಕಾರ್ಯಗಳಿಗಾಗಿ ಅಕ್ರಮವಾಗಿ ಬಳಸಿಕೊಂಡು ಪರಿಶಿಷ್ಟ ಪಂಗಡ ಸಮುದಾಯಕ್ಕೆ ಬಿ ನಾಗೇಂದ್ರ ಅನ್ಯಾಯ ಎಸಗಿದ್ದಾರೆ ಅವರು ಕೂಡಲೇ ರಾಜೀನಾಮೆ ನೀಡಬೇಕು ಎಂದು ಅಗ್ರಹಿಸಿದರು. ಜನರ ಹಕ್ಕು ಮತ್ತು ನ್ಯಾಯಕ್ಕಾಗಿ ನಡೆಯುತ್ತಿರುವ ಹೋರಾಟಕ್ಕೆ ನಮ್ಮ ಬೆಂಬಲ ಸದಾ ಮುಂದುವರಿಯಲಿದೆ ಎಂದರು. ಇಂದಿನ ಪ್ರತಿಭಟನೆಯಲ್ಲಿ ಕಂಪ್ಲಿ ವಿಧಾನಸಭಾ ಕ್ಷೇತ್ರದ ಭಾರತೀಯ ಜನತಾ ಪಕ್ಷದ ಎಲ್ಲಾ ಮುಂಚೂಣಿ ಕಾರ್ಯಕರ್ತರು, ಸಮುದಾಯದ ಹಿರಿಯ ಮುಖಂಡರು ಉಪಸ್ಥಿತರಿದ್ದರು.

# ಜಮೀನು ಅಕ್ರಮ ಪರಭಾರೆ ಪ್ರಕರಣ:

## ನೋಂದಣಿ ಅಧಿಕಾರಿ ಸೇರಿ ಆರೋಪಿಗಳ ಬಂಧನಕ್ಕೆ ಆಗ್ರಹ



ಬಳ್ಳಾರಿ : ಜಮೀನುಗಳ ಅಕ್ರಮ ಪರಭಾರೆ ಹಾಗೂ ನಕಲಿ ದಾಖಲೆಗಳ ಮೂಲಕ ನೋಂದಣಿ ಮಾಡಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ತಪ್ಪಿತಸ್ಥ ನೋಂದಣಿ ಅಧಿಕಾರಿ ಸೇರಿದಂತೆ ಪ್ರಕರಣದಲ್ಲಿ ಭಾಗಿಯಾಗಿರುವ ಭೂಗಳ್ಳರನ್ನು ಕೂಡಲೇ ಬಂಧಿಸಿ, ರೈತರಿಗೆ ನ್ಯಾಯ ಒದಗಿಸಬೇಕು ಎಂದು ಕರ್ನಾಟಕ ಪ್ರಾಂತ ರೈತ ಸಂಘಟನೆಯ ರಾಜ್ಯ ಸಹ ಕಾರ್ಯದರ್ಶಿ ನರಸಣ್ಣ ನಾಯಕ ಆಗ್ರಹಿಸಿದರು.

ಕರ್ನಾಟಕ ಪ್ರಾಂತ ರೈತ ಸಂಘಟನೆಯ ಬಳ್ಳಾರಿ ಜಿಲ್ಲಾ ಸಮಿತಿ ನೇತೃತ್ವದಲ್ಲಿ ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಆರಂಭಿಸಿರುವ ಹೋರಾಟ ಎರಡನೇ ದಿನಕ್ಕೆ ಕಾಲಿಟ್ಟಿದೆ. ರೈತರು ರಾತ್ರಿ ಸ್ಥಳದಲ್ಲೇ ವಾಸ್ತವ್ಯ ಹೂಡಿ ಪ್ರತಿಭಟನೆ ಮುಂದುವರಿಸಿದ್ದಾರೆ.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ನರಸಣ್ಣ ನಾಯಕ, ಸಿರುಗುಪ್ಪ ತಾಲೂಕಿನ ಹಳೆಕೋಟೆ, ದೇವಲಾಪುರ, ಮಂಜಿನಾಳ, ನಡವಿ, ತೆಕ್ಕಲಕೋಟೆ ಹಾಗೂ ಸಿರಿಗೇರಿ ಗ್ರಾಮಗಳ ವ್ಯಾಪ್ತಿಯಲ್ಲಿರುವ ಜಮೀನುಗಳನ್ನು ಅಕ್ರಮವಾಗಿ ಬೇರೆಯವರ ಹೆಸರಿಗೆ ಪಟ್ಟಾ ಮಾಡಲಾಗಿದೆ ಎಂದು ಆರೋಪಿಸಿದರು.

ಸುಳ್ಳು ಹಾಗೂ ನಕಲಿ ದಾಖಲೆಗಳನ್ನು ಸೃಷ್ಟಿಸಿ, ಮೂಲ ಪಟ್ಟಾದಾರರು ಇಲ್ಲದಿದ್ದರೂ ಗೈರು ಪಟ್ಟಾದಾರರೆಂದು ತೋರಿಸಿ 300ಕ್ಕೂ ಅಧಿಕ ಎಕರೆ ಜಮೀನನ್ನು ಸಂಬಂಧಿಕರು ಹಾಗೂ ಇತರರ ಹೆಸರಿಗೆ ನೋಂದಣಿ ಮಾಡಿಕೊಳ್ಳಲಾಗಿದೆ. ಈ ಅಕ್ರಮಕ್ಕೆ ಸಹಕರಿಸಿದ ಅಧಿಕಾರಿಗಳು ಹಾಗೂ ಭೂಗಳ್ಳರ ವಿರುದ್ಧ ಇದುವರೆಗೆ ಸೂಕ್ತ ಕ್ರಮ ಕೈಗೊಂಡಿಲ್ಲ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

ಪ್ರಕರಣದಲ್ಲಿ ಭಾಗಿಯಾಗಿರುವ ಪೂರ್ಣ, ಪ್ರಕಾಶ್ ರಾವ್, ಹಂಪಾರೆಡ್ಡಿ, ರವಿರೆಡ್ಡಿ, ಅಂಜಿ–ರೆಡ್ಡಿ ಸೇರಿದಂತೆ ಆರೋಪಿಗಳನ್ನು ಕೂಡಲೇ ಬಂಧಿಸಬೇಕು. ಆದರೆ, ಅಕ್ರಮವನ್ನು ಪ್ರಶ್ನಿಸಿ ನ್ಯಾಯಕ್ಕಾಗಿ ಹೋರಾಟ ನಡೆಸುತ್ತಿರುವ ರೈತರು ಹಾಗೂ ರೈತ ಮುಖಂಡರ ವಿರುದ್ಧವೇ ಪೊಲೀಸರು ಪ್ರಕರಣ ದಾಖಲಿಸುತ್ತಿರುವುದು ಖಂಡನೀಯ ಎಂದರು.

ಭೂ ವಿವಾದಗಳಲ್ಲಿ ಪೊಲೀಸರು ಮಧ್ಯಪ್ರವೇಶಿಸಬಾರದು ಎಂಬ ಸರ್ಕಾರದ ಸ್ಪಷ್ಟ ಆದೇಶವಿದ್ದರೂ, ಭೂಗಳ್ಳರು ದೂರು ನೀಡಿದ ತಕ್ಷಣ ಬಡ ರೈತರ ವಿರುದ್ಧ ಎಫ್‌ಐಆರ್ ದಾಖಲಿಸಲಾಗುತ್ತಿದೆ ಎಂದು ಆರೋಪಿಸಿದ ಅವರು, ರೈತರು ಮತ್ತು ರೈತ ಮುಖಂಡರ ಮೇಲೆ ದಾಖಲಿಸಿರುವ ಸುಳ್ಳು ಪ್ರಕರಣಗಳನ್ನು ಕೂಡಲೇ ಹಿಂಪಡೆಯಬೇಕು ಎಂದು ಒತ್ತಾಯಿಸಿದರು.

ಉಳುಮೆ ಮಾಡುತ್ತಿರುವ ರೈತರಿಗೆ ಫಾರಂ–1 ಸಲ್ಲಿಸಲು ಅವಕಾಶ ನೀಡಬೇಕು. ಜಮೀನುಗಳ ಅಕ್ರಮ ಪರಭಾರೆ ಹಾಗೂ ನೋಂದಣಿಗೆ ಕಾರಣ–ರಾದ ಸಿರುಗುಪ್ಪ ತಾಲೂಕಿನ ಸಬ್ ರಿಜಿಸ್ಟ್ರಾರ್ ಯಲ್ಲಾ ರೆಡ್ಡಪ್ಪ ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಂಡು ಬಂಧಿಸಬೇಕು ಎಂದು ನರಸಣ್ಣ ನಾಯಕ ಆಗ್ರಹಿಸಿದರು.

ರೈತರ ಮೇಲಿನ ಅನ್ಯಾಯವನ್ನು ಸರಿಪಡಿಸುವವರೆಗೆ ಹೋರಾಟವನ್ನು ಮುಂದುವರಿಸುವುದಾಗಿ ಅವರು ಸ್ಪಷ್ಟಪಡಿಸಿದರು.

ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಕೃಷಿ ಕಾರ್ಮಿಕರು ಹಾಗೂ ರೈತರಿಗೆ ಸ್ಥಳದಲ್ಲೇ ಅಡುಗೆ ಮಾಡಿ ಊಟದ ವ್ಯವಸ್ಥೆ ಮಾಡಲಾಗಿತ್ತು. ರೈತರ ಹೋರಾಟಕ್ಕೆ ಸಂಘಟನೆಯ ಮುಖಂಡರು ಹಾಗೂ ಕಾರ್ಯಕರ್ತರು ಬೆಂಬಲ ನೀಡಿದರು.

## BTPSಗೆ ಭೂಮಿ ನೀಡಿ ತರಬೇತಿ ಪಡೆದರೂ ಸಿಗದ ಉದ್ಯೋಗ

## ವಿದ್ಯುತ್ ತಂತಿ ಹಿಡಿದು ವ್ಯಕ್ತಿ ಆತ್ಮಹತ್ಯೆ



ಬಳ್ಳಾರಿ: ಬಳ್ಳಾರಿ ಶಾಖೋತ್ಪನ್ನ ವಿದ್ಯುತ್ ಕೇಂದ್ರ ಸ್ಥಾಪನೆಗೆ ಜಮೀನು ನೀಡಿ ಭರವಸೆಯಂತೆ ಕೆಲಸ ಸಿಗದೇ ಮನನೊಂದು ವ್ಯಕ್ತಿಯೊಬ್ಬರು ವಿದ್ಯುತ್ ತಂತಿ ಹಿಡಿದು ಆತ್ಮಹತ್ಯೆ ಮಾಡಿಕೊಂಡಿರುವ ಧಾರುಣ ಘಟನೆ ಬಳ್ಳಾರಿ ತಾಲೂಕಿನ ಕುಡುತಿನಿ ಪಟ್ಟಣದ ಇಂದಿರಾ ನಗರದಲ್ಲಿ ನಡೆದಿದೆ.

ಕುಡುತಿನಿ ನಿವಾಸಿ ಚಂದ್ರಶೇಖರ (44) ಆತ್ಮಹತ್ಯೆ ಮಾಡಿಕೊಂಡ ದುರ್ದೈವಿ. 2001ರಲ್ಲಿ ಕುಡುತಿನಿ ಬಳಿ ಬಳ್ಳಾರಿ ಥರ್ಮಲ್ ಪವರ್ ಪ್ಲಾಂಟ್ ಸ್ಥಾಪನೆಯಾದ ಸಂದರ್ಭದಲ್ಲಿ ಚಂದ್ರಶೇಖರ್ ಅವರ ಕುಟುಂಬ 2.5 ಎಕರೆ ಜಮೀನನ್ನು ಯೋಜನಾ ಪ್ರದೇಶಕ್ಕೆ ನೀಡಿತ್ತು. ಭೂಮಿ ಕಳೆದುಕೊಂಡವರಿಗೆ ಕೆಲಸ ನೀಡುವ ನಿಯಮದಂತೆಕಳೆದ ಒಂದು ವರ್ಷದಿಂದ ಚಂದ್ರಶೇಖರ್ ಉದ್ಯೋಗಕ್ಕಾಗಿ ಕಾರ್ಖಾನೆಯ ಕಚೇರಿಗೆ ಅಲೆದಾಡುತ್ತಿದ್ದರು.

ಉದ್ಯೋಗ ನೀಡುವುದಾಗಿ ಭರವಸೆ ನೀಡಿದ್ದ ಬಿಟಿಪಿಎಸ್ ಆಡಳಿತ ಮಂಡಳಿ ಅವರಿಗೆ ಅಗತ್ಯ ತರಬೇತಿಯನ್ನೂ ನೀಡಿತ್ತು. ಆದರೆ ತರಬೇತಿ ಮುಗಿದು ಬರೋಬ್ಬರಿ ಏಳು ತಿಂಗಳು ಕಳೆದರೂ ಕಂಪನಿ ಮಾತ್ರ ಉದ್ಯೋಗ ನೀಡದೆ ಸತಾಯಿಸುತ್ತಿತ್ತು ಎಂದು ಆರೋಪಿಸಲಾಗಿದೆ. ಇದರಿಂದ ತೀವ್ರ ಮಾನಸಿಕ ಖಿನ್ನತೆ ಹಾಗೂ ಆರ್ಥಿಕ ಸಂಕಷ್ಟಕ್ಕೆ ಒಳಗಾಗಿದ್ದ ಚಂದ್ರಶೇಖರ, ಊರಿನಲ್ಲಿ ವಿದ್ಯುತ್ ತಂತಿಯನ್ನು ಹಿಡಿದು ಪ್ರಾಣ ಕಳೆದುಕೊಂಡಿದ್ದಾರೆ. ಘಟನೆಯಿಂದ ಆಕ್ರೋಶಗೊಂಡ ಮೃತನ ಕುಟುಂಬಸ್ಥರು ಹಾಗೂ ಸ್ಥಳೀಯರು, ಚಂದ್ರಶೇಖರ್ ಅವರ ಮೃತದೇಹವನ್ನು ಬಿಟಿಪಿಎಸ್ ಕಾರ್ಖಾನೆಯ ಮುಖ್ಯ ದ್ವಾರದ ಮುಂದೆ ಇಟ್ಟು ಧರಣಿ ನಡೆಸಿದರು. ಭೂಮಿಯನ್ನೂ ಕಸಿದುಕೊಂಡು, ಕೊಟ್ಟ ಮಾತಿನಂತೆ ಕೆಲಸವನ್ನೂ ಕೊಡದೆ ನಮ್ಮವರ ಸಾವಿಗೆ ಕಾರಣರಾಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ ಪ್ರತಿಭಟನಾಕಾರರು, ಮೃತನ ಕುಟುಂಬಕ್ಕೆ ಸೂಕ್ತ ಪರಿಹಾರ ಹಾಗೂ ಕುಟುಂಬದ ಒಬ್ಬರಿಗೆ ಕಾಯಂ ಉದ್ಯೋಗ ನೀಡಬೇಕೆಂದು ಪಟ್ಟು ಹಿಡಿದರು.

ಘಟನಾ ಸ್ಥಳಕ್ಕೆ ಕುಡುತಿನಿ ಪೊಲೀಸ್ ಠಾಣೆಯ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಮಾದಿಗ ಸಮುದಾಯದ ಮಕ್ಕಳಿಗೆ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ ತೆರೆಯಲು ಆಗ್ರಹ



ಕೂಡ್ಲಿಗಿ/ಕೊಟ್ಟೂರು : ಮಾದಿಗ ಸಮುದಾಯದ ಮಕ್ಕಳಿಗೆ ಐಎಎಸ್, ಕೆಎಎಸ್ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ಹಾಗೂ ಗುಣಮಟ್ಟದ ತರಬೇತಿ ನೀಡಲು ಜಿಲ್ಲೆ ಹಾಗೂ ತಾಲೂಕು ಮಟ್ಟದಲ್ಲಿ ತರಬೇತಿ ಕೇಂದ್ರಗಳನ್ನು ಆರಂಭಿಸಬೇಕು ಎಂದು ಕರ್ನಾಟಕ ಮಾದಾರ ಮಹಾಸಭಾ ವಿಜಯನಗರ ಜಿಲ್ಲಾಧ್ಯಕ್ಷ ನಿಂಬಗಲ್ ರಾಮಕೃಷ್ಣ ಆಗ್ರಹಿಸಿದರು.

ಕೊಟ್ಟೂರಿನ ಪ್ರವಾಸಿ ಮಂದಿರದಲ್ಲಿ ಬುಧವಾರ ಆಯೋಜಿಸಿದ್ದ ಕರ್ನಾಟಕ ಮಾದಾರ ಮಹಾಸಭಾದ ಸದಸ್ಯತ್ವ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮಾದಿಗ ಸಮುದಾಯವು ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಹಾಗೂ ರಾಜಕೀಯವಾಗಿ ಹಲವು ವರ್ಷಗಳಿಂದ ಹಿಂದುಳಿದಿದೆ. ಸಮುದಾಯದ ಸಮಗ್ರ ಅಭಿವೃದ್ಧಿಗೆ ಸಂಘಟನೆ ಅತ್ಯಂತ ಮುಖ್ಯವಾಗಿದ್ದು, ಪ್ರತಿಯೊಬ್ಬರೂ ಸಂಘಟನೆಯೊಂದಿಗೆ ಕೈಜೋಡಿಸಿ ಸಮುದಾಯದ ಏಳ್ಗೆಗೆ ಶ್ರಮಿಸಬೇಕು ಎಂದರು.

ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅಗತ್ಯವಿರುವ ತರಬೇತಿ, ಮಾರ್ಗದರ್ಶನ ಹಾಗೂ ಶೈಕ್ಷಣಿಕ ಸಂಪನ್ಮೂಲಗಳು ಗ್ರಾಮೀಣ ಪ್ರದೇಶದ ಮಕ್ಕಳಿಗೆ ಸುಲಭವಾಗಿ ಲಭ್ಯವಾಗುತ್ತಿಲ್ಲ.

ಇದರಿಂದ ಪ್ರತಿಭಾವಂತ ವಿದ್ಯಾರ್ಥಿಗಳು ಅವಕಾಶಗಳಿಂದ ವಂಚಿತರಾಗುತ್ತಿದ್ದಾರೆ. ಆದ್ದರಿಂದ ಐಎಎಸ್, ಕೆಎಎಸ್ ಸೇರಿದಂತೆ ವಿವಿಧ ಸರ್ಕಾರಿ ಹುದ್ದೆಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ವಿಶೇಷ ತರಬೇತಿ ಕೇಂದ್ರಗಳನ್ನು ಸ್ಥಾಪಿಸುವ ಅಗತ್ಯವಿದೆ ಎಂದು ರಾಮಕೃಷ್ಣ ಹೇಳಿದರು.

ಕರ್ನಾಟಕ ಮಾದಾರ ಮಹಾಸಭಾದ ಅಧ್ಯಕ್ಷ ಹಾಗೂ ಸಚಿವ ಕೆ.ಎಚ್. ಮುನಿಯಪ್ಪ, ಮಾಜಿ ಸಚಿವ ಎಚ್. ಆಂಜನೇಯ, ಮಾಜಿ ಸಚಿವ ಹಾಗೂ ಸಂಸದ ಗೋವಿಂದ ಕಾರಜೋಳ, ಮಾಜಿ ಕೇಂದ್ರ ಸಚಿವ ಎ. ನಾರಾಯಣ ಸೇರಿದಂತೆ ಸಮುದಾಯದ ಹಲವು ನಾಯಕರು ಪಕ್ಷಾತೀತವಾಗಿ ಸಂಘಟನೆಯ ಮೂಲಕ ಸಮುದಾಯದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಅವರ ಮಾರ್ಗದರ್ಶನದಲ್ಲಿ ಸಂಘಟನೆಯನ್ನು ಮತ್ತಷ್ಟು ಬಲಪಡಿಸಬೇಕು ಎಂದು ತಿಳಿಸಿದರು.

ಜಿಲ್ಲಾ ಉಪಾಧ್ಯಕ್ಷ ಹಡಗಲಿ ಪೂಜಪ್ಪ ಮಾತನಾಡಿ, ಪರಿಶಿಷ್ಟ ಜಾತಿಯ 110 ಪಂಗಡಗಳ ಪೈಕಿ ಮಾದಿಗ ಸಮುದಾಯವು ಅತ್ಯಂತ ಹಿಂದುಳಿದ ಸಮುದಾಯಗಳಲ್ಲಿ ಒಂದಾಗಿದೆ. ಶಿಕ್ಷಣ, ಉದ್ಯೋಗ ಹಾಗೂ ರಾಜಕೀಯ ಕ್ಷೇತ್ರದಲ್ಲಿ ಸಮುದಾಯದ ಪ್ರಾತಿನಿಧ್ಯ ಹೆಚ್ಚಬೇಕಾದರೆ ಸಂಘಟಿತ ಹೋರಾಟ ಅಗತ್ಯವಾಗಿದೆ ಎಂದರು.

ಮಾದಿಗ ಸಮುದಾಯದ ಯುವಕರು ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಸರ್ಕಾರಿ ಸೌಲಭ್ಯಗಳು, ಶೈಕ್ಷಣಿಕ ಅವಕಾಶಗಳು ಹಾಗೂ ಉದ್ಯೋಗಾವಕಾಶಗಳ ಕುರಿತು ಯುವಜನರಲ್ಲಿ ಜಾಗೃತಿ ಮೂಡಿಸುವ ಕೆಲಸ ಸಂಘಟನೆಯಿಂದ ನಡೆಯಬೇಕು ಎಂದು ಅವರು ಹೇಳಿದರು.

ಸಮುದಾಯದ ಮಕ್ಕಳಿಗೆ ಉತ್ತಮ ಶಿಕ್ಷಣ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ ದೊರೆತರೆ ಅವರು ಉನ್ನತ ಹುದ್ದೆಗಳನ್ನು ಅಲಂಕರಿಸುವ ಮೂಲಕ ಸಮುದಾಯದ ಸಾಮಾಜಿಕ ಹಾಗೂ ಆರ್ಥಿಕ ಪ್ರಗತಿಗೆ ಕೊಡುಗೆ ನೀಡಲು ಸಾಧ್ಯವಾಗುತ್ತದೆ.

ಈ ನಿಟ್ಟಿನಲ್ಲಿ ಸಂಘಟನೆಯ ಸದಸ್ಯತ್ವ ಅಭಿಯಾನವನ್ನು ಮತ್ತಷ್ಟು ಪರಿಣಾಮಕಾರಿಯಾಗಿ ನಡೆಸುವ ಅಗತ್ಯವಿದೆ ಎಂದು ಮುಖಂಡರು ಅಭಿಪ್ರಾಯಪಟ್ಟರು.

## ಅಧಿಕಾರಕ್ಕೆ ಅಂಟಿಕೊಳ್ಳದ ರಾಜಕಾರಣಿ:

## ದೇವರಾಜ ಅರಸು ಜನಪರ ಆಡಳಿತಕ್ಕೆ ಮಾದರಿ



ಹೂವಿನಹಡಗಲಿ : ಅಧಿಕಾರಕ್ಕೆ ಅಂಟಿಕೊಳ್ಳದೆ, ಜನರ ಸೇವೆಯನ್ನೇ ತಮ್ಮ ರಾಜಕೀಯ ಜೀವನದ ಮುಖ್ಯ ಗುರಿಯನ್ನಾಗಿ ಮಾಡಿಕೊಂಡು ನಿರಂತರವಾಗಿ ಜನಪರ ಕೆಲಸ ಮಾಡಿದ ರಾಜಕಾರಣಿಗಳಲ್ಲಿ ಮಾಜಿ ಮುಖ್ಯಮಂತ್ರಿ ಡಿ. ದೇವರಾಜ ಅರಸು ಅವರು ಪ್ರಮುಖರಾಗಿದ್ದಾರೆ ಎಂದು ಸರ್ಕಾರಿ ನೌಕರರ ಸಂಘದ ತಾಲೂಕು ಅಧ್ಯಕ್ಷ ಎ. ಕೊಟ್ರಗೌಡ ಹೇಳಿದರು.

ಹೂವಿನಹಡಗಲಿಯ ತಾಲೂಕು ಪಂಚಾಯಿತಿ ರಾಜೀವ್‌ಗಾಂಧಿ ಸಭಾಂಗಣದಲ್ಲಿ ತಾಲೂಕು ಆಡಳಿತ, ತಾಲೂಕು ಪಂಚಾಯಿತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ಡಿ. ದೇವರಾಜ ಅರಸು ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ದೇವರಾಜ ಅರಸು ಅವರು ಸಾಮಾನ್ಯ ಜನರ ಸಮಸ್ಯೆಗಳನ್ನು ಅರಿತು, ಸಮಾಜದ ಹಿಂದುಳಿದ ಹಾಗೂ ಶೋಷಿತ ವರ್ಗಗಳ ಅಭಿವೃದ್ಧಿಗೆ ಹಲವು ಮಹತ್ವದ ಯೋಜನೆಗಳು ಮತ್ತು ಸುಧಾರಣೆಗಳನ್ನು ಜಾರಿಗೆ ತಂದಿದ್ದರು. ಜನಸೇವೆಯ ಉದ್ದೇಶದಿಂದ ರಾಜಕೀಯಕ್ಕೆ ಪ್ರವೇಶಿಸಿದ ಅವರು ತಮ್ಮ ಆಡಳಿತಾವಧಿಯಲ್ಲಿ ಜನಪರ ಆಡಳಿತಕ್ಕೆ ಆದ್ಯತೆ ನೀಡಿದರು ಎಂದು ಕೊಟ್ರಗೌಡ ಹೇಳಿದರು.

ಸಮಾಜದಲ್ಲಿ ಅವಕಾಶಗಳಿಂದ ವಂಚಿತರಾಗಿದ್ದ ಹಿಂದುಳಿದ ವರ್ಗಗಳು ಹಾಗೂ ದುರ್ಬಲ ವರ್ಗಗಳಿಗೆ ಸಾಮಾಜಿಕ ಮತ್ತು ಆರ್ಥಿಕವಾಗಿ ಬಲ ತುಂಬುವ ನಿಟ್ಟಿನಲ್ಲಿ ಅರಸು ಅವರ ಕೊಡುಗೆ ಮಹತ್ವದ್ದಾಗಿದೆ.

ದಿನಾಂಕ : 21-08-2026

# ಸಿನಿ ಕಹಾನಿ

## ಲೈಟ್ಸ್.. ಕ್ಯಾಮೆರಾ.. ಆಕ್ಷನ್..

## ಪ್ರೇಮದ ಊರಲಿ ಬಾನಲಿ ಜಾರಿದ... ಹಾಡು



ಅಕ್ಷಿ ಚಲನಚಿತ್ರ ನಿರ್ದೇಶನಕ್ಕೆ ರಾಷ್ಟ್ರಪ್ರಶಸ್ತಿ ಪಡೆದು ಗಮನ ಸೆಳೆದಿದ್ದ ನಿರ್ದೇಶಕ ಮನೋಜ್‌ಕುಮಾರ್ ಅವರ ನಿರ್ದೇಶನದ ಮತ್ತೊಂದು ಚಿತ್ರ ಪ್ರೇಮದ ಊರಲಿ. ಈ ಚಿತ್ರದ ಟೈಟಲ್ ಟ್ರ್ಯಾಕ್ ಸೇರಿದಂತೆ ಎಲ್ಲಾ ಹಾಡುಗಳು ಈಗಾಗಲೇ ಬಿಡುಗಡೆಯಾಗಿವೆ. ಇದೀಗ ಈ ಚಿತ್ರದ ಮತ್ತೊಂದು ನೂತನ ಹಾಡು ಬಿಡುಗಡೆಯಾಗಿದೆ.

"ಬಾನಲಿ ಜಾರಿದ..." ಎಂಬ ಸುಮಧುರ ಸಾಹಿತ್ಯ ಇರುವ ಈ ಯುಗಳ ಗೀತೆಯಲ್ಲಿ ನಾಯಕ ಶ್ರೀರಾಮ್ (ಸಂತೋಷ್) ಹಾಗೂ ನಾಯಕಿ ತಪಸ್ವಿನಿ ಪೂಣಚ್ಚ(ರುಕ್ಮಿಣಿ) ಜೋಡಿಯಾಗಿ ಕಣ್ಮನ ಸೆಳೆದಿದ್ದು, ತಪಸ್ವಿನಿ ಅವರ ಮುದ್ದಾದ ಅಭಿನಯಕ್ಕೆ ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಪ್ರೀತಿಯಲ್ಲಿ ಬೀಳುವ ಸುಂದರ ಭಾವನೆಗಳನ್ನು ಕಾವ್ಯಾತ್ಮಕವಾಗಿ ಕಟ್ಟಿಕೊಟ್ಟಿರುವ ಈ ಹಾಡಿಗೆ ಅಭಿಜಿತ್ ತೀರ್ಥಹಳ್ಳಿ ಸಾಹಿತ್ಯ ಬರೆದಿದ್ದು, ಸುನಾದ ಗೌತಮ್ ಅವರ ಸಂಗೀತ ನಿರ್ದೇಶನದಲ್ಲಿ ನಿನಾದ ನಾಯಕ್ ಮತ್ತು ರಜತ್ ಹೆಗ್ಡೆ ಧ್ವನಿಯಾಗಿದ್ದಾರೆ.

ಪ್ರೇಮದ ಊರಲಿ ಚಿತ್ರದಲ್ಲಿ ಶ್ರೀರಾಮ್ ನಾಯಕನಾಗಿ ನಟಿಸಿದ್ದು, ಅವರಿಗೆ ನಾಯಕಿಯರಾಗಿ ತಪಸ್ವಿನಿ ಪೂಣಚ್ಚ ಮತ್ತು ರಮಿಕಾಶಿವು ಸಾಥ್ ನೀಡಿದ್ದಾರೆ. ಹಿರಿಯ ನಟ ರಂಗಾಯಣ ರಘು ಅವರು ನಾಯಕನ ತಂದೆಯ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ವೆನಿಲ್ಲಾ ಎಂಟರ್‌ಟೈನ್ಮೆಂಟ್ಸ್ ಹಾಗೂ ಜಾನಕಮ್ಮ ಪ್ರೊಡಕ್ಷನ್ಸ್ ಬ್ಯಾನರ್ ಅಡಿಯಲ್ಲಿ ಮಮತಾ ದೇವೇಂದ್ರ ಎಂ, ಪ್ರಶಾಂತ ಡಿ.ಎಸ್. ಮತ್ತು ರಮೇಶ ಎನ್. ಅವರುಗಳು ಈ ಚಿತ್ರವನ್ನು ನಿರ್ಮಿಸಿದ್ದಾರೆ. ರಾಜಕಾಂತ್ ಎಸ್. ಕೆ. ಅವರ ಛಾಯಾಗ್ರಹಣ ಮತ್ತು ಹರ್ಷಿತ್ ಪ್ರಭು ಅವರ ಸಂಕಲನವಿರುವ ಈ ಚಿತ್ರವು ಸದ್ಯದಲ್ಲೇ ತೆರೆಗೆ ಬರಲು ಸಿದ್ಧತೆ ನಡೆಸಿದೆ.

## ದೇವಿಮಹಾತ್ಮೆ ಚಿತ್ರದಿಂದ ಜಗವ ಕಾಯೋ ದೇವನು ಹಾಡು

ಟೀಸರ್ ಮೂಲಕವೇ ಸಿನಿರಸಿಕರಲ್ಲಿ ಭಾರಿ ಕುತೂಹಲ ಮೂಡಿಸಿರುವ ಬಹುನಿರೀಕ್ಷಿತ 'ದೇವಿ ಮಹಾತ್ಮೆ' ಚಿತ್ರದ ಹೊಸ ಗೀತೆಯೊಂದು ಇತ್ತೀಚೆಗಷ್ಟೇ ಬಿಡುಗಡೆಯಾಗಿದೆ. ಕಾಂತಾರ: ಚಾಪ್ಟರ್ 1 ಚಿತ್ರದ ಪ್ರಸಿದ್ಧ 'ಬ್ರಹ್ಮಕಲಶ' ಗೀತೆಯ ಮೂಲಕ ಕನ್ನಡ ಚಿತ್ರರಂಗಕ್ಕೆ ಪಾದಾರ್ಪಣೆ ಮಾಡಿದ್ದ ಗಾಯಕ ಹಾಗೂ ಸಂಯೋಜಕ ಅಬ್ಬಿ ವಿ. ಅವರು ಈ ಚಿತ್ರದ "ಜಗವ ಕಾಯೋ ದೇವನು..." ಎಂಬ ಹಾಡಿಗೆ ಧ್ವನಿಯಾಗಿದ್ದಾರೆ. ತಮ್ಮ ವಿಶಿಷ್ಟ ಕಂಠಸಿರಿಯಿಂದ ಕನ್ನಡಿಗರ ಮನಗೆದ್ದಿರುವ ಅಬ್ಬಿ ಅವರು, ಮತ್ತೊಮ್ಮೆ ಕನ್ನಡಿಗರ ಮನಸೂರೆಗೊಳ್ಳಲು ಸಜ್ಜಾಗಿದ್ದಾರೆ.




ಕೆನಡಾದಲ್ಲಿ ಬೆಳೆದು, ಕರ್ನಾಟಕ ಹಾಗೂ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಎರಡರಲ್ಲೂ ಪರಿಣತಿ ಹೊಂದಿರುವ ಅಬ್ಬಿ ವಿ, ಭಕ್ತಿ ಮತ್ತು ದೈವಿಕ ಭಾವದ ಗೀತೆಗಳನ್ನು ಪ್ರಸ್ತುತಪಡಿಸುವುದರಲ್ಲಿ ತಮ್ಮದೇ ಆದ ವಿಶಿಷ್ಟ ಛಾಪು ಮೂಡಿಸಿದವರು. ಈ ವಿಶೇಷ ಗೀತೆಗೆ 'ಕಾಂತಾರ' ಖ್ಯಾತಿಯ ಗೀತರಚನೆಕಾರ ಪ್ರಮೋದ್ ಮರವಂತೆ ಅವರು ಅರ್ಥಗರ್ಭಿತ ಸಾಹಿತ್ಯ ಬರೆದಿದ್ದು, ಲಿಕಿತ್ ಪ್ರಸಾದ್ ಶೆಟ್ಟಿ ಸುಮಧುರ ಸಂಗೀತ ಸಂಯೋಜನೆ ಮಾಡಿದ್ದಾರೆ. ಸಾಹಿತ್ಯ, ಸಂಗೀತ ಹಾಗೂ ಅಬ್ಬಿ ವಿ. ಅವರ ಕಂಠಸಿರಿಯ ಅಪರೂಪದ ಸಂಗಮವಾಗಿರುವ ಈ ಹಾಡು ಕೇಳುಗರಿಂದ ವ್ಯಾಪಕ ಮೆಚ್ಚುಗೆ ಗಳಿಸುತ್ತಿದೆ. ಜೊತೆಗೆ ಹಾಡಿನ ವಿಶುವಲ್ಸ್ ಕೂಡ ಅತ್ಯಂತ ಸೊಗಸಾಗಿ ಮೂಡಿಬಂದಿದ್ದು, ಸಿನಿ ಪ್ರೇಕ್ಷಕರ ಗಮನ ಸೆಳೆಯುತ್ತಿವೆ. ಇದಕ್ಕೂ ಮುನ್ನ ಬಿಡುಗಡೆಯಾಗಿದ್ದ ದೇವಿ ಮಹಾತ್ಮೆ ಚಿತ್ರದ 1 ನಿಮಿಷ 5 ಸೆಕೆಂಡುಗಳ ಟೀಸರ್ ಸಿನಿ ರಸಿಕರಲ್ಲಿ ಚಿತ್ರದ ಬಗೆಗಿನ ನಿರೀಕ್ಷೆಯನ್ನು ದುಪ್ಪಟ್ಟು ಮಾಡಿತ್ತು. ಹಿರಿಯ ನಟ ರಂಗಾಯಣ ರಘು ಅವರ ಅದ್ಭುತ ಅಭಿನಯ ಹಾಗೂ ಲಿಕಿತ್ ಪ್ರಸಾದ್ ಶೆಟ್ಟಿ ಅವರ ರೋಚಕ ಹಿನ್ನೆಲೆ ಸಂಗೀತ ಟೀಸರ್‌ನ ಪ್ರಮುಖ ಆಕರ್ಷಣೆಯಾಗಿದ್ದವು. ಎಸ್.ಕೆ. ರಾವ್ ಅವರ ಅತ್ಯುತ್ತಮ ಛಾಯಾಗ್ರಹಣ ಸಿನಿಪ್ರಿಯರ ವಲಯದಲ್ಲಿ ಪ್ರಶಂಸೆಗೆ ಪಾತ್ರವಾಗಿತ್ತು. ಈ ಎಲ್ಲಾ ಅಂಶಗಳು ಕುಟುಂಬ ಸಮೇತ ಎಲ್ಲಾ ವರ್ಗದ ಪ್ರೇಕ್ಷಕರು ಚಿತ್ರಮಂದಿರಕ್ಕೆ ಬಂದು ಈ ಸಿನಿಮಾ ವೀಕ್ಷಿಸಬಹುದು ಎಂಬ ಭರವಸೆಯನ್ನು ಮೂಡಿಸಿವೆ.

ಯುವಿಜಿ ಸ್ಟುಡಿಯೋ ಬ್ಯಾನರ್ ಅಡಿಯಲ್ಲಿ ವಿದ್ಯಾಗಾಂಧಿ ರಾಜನ್ ಅವರು ಈ ಚಿತ್ರವನ್ನು ಅದ್ದೂರಿಯಾಗಿ ನಿರ್ಮಿಸುತ್ತಿದ್ದು, ನಾಗರಾಜ ಸೋಮಯಾಜಿ ಅವರು ಚಿತ್ರಕಥೆ ರಚಿಸಿ ನಿರ್ದೇಶನದ ಹೊಣೆ ಹೊತ್ತಿದ್ದಾರೆ. ಈ ಚಿತ್ರ-ಕ್ಕೆ ನಾಗರಾಜ ಸೋಮಯಾಜಿ ಮತ್ತು ಭಾಸ್ಕರ ಬಂಗೇರ ಜಂಟಿಯಾಗಿ ಸಂಭಾಷಣೆಗಳನ್ನು ರಚಿಸಿದ್ದು, ಉಜ್ವಲ್ ಚಂದ್ರ ಸಂಕಲನದ ಜವಾಬ್ದಾರಿ ನಿಭಾಯಿಸಿದ್ದಾರೆ. ಸದ್ಯ ಬಿಡುಗಡೆಯಾಗಿರುವ 'ಜಗವ ಕಾಯೋ ದೇವನು' ಹಾಡಿನ ಯಶಸ್ಸು ಚಿತ್ರತಂಡದ ಉತ್ಸಾಹವನ್ನು ಹೆಚ್ಚಿಸಿದ್ದು, ದೇವಿಮಹಾತ್ಮೆ ಚಿತ್ರವು ಶೀಘ್ರದಲ್ಲೇ ರಾಜ್ಯಾದ್ಯಂತ ಬೆಳ್ಳಿಪರದೆಗೆ ಅಪ್ಪಳಿಸಲು ಸಜ್ಜಾಗುತ್ತಿದೆ.

## ಡಬ್ಬಿಂಗ್ ಮುಗಿಸಿದ ಹುಬ್ಬಳ್ಳಿ ಹಂಟರ್ಸ್

ಬೆಲ್‌ಬಾಟಮ್ ಚಿತ್ರದ ನಿರ್ಮಾಪಕ ಸಂತೋಷ್‌ಕುಮಾರ್ ಕೆ.ಸಿ. ಅವರ ನಿರ್ಮಾಣ ಸಾರಥ್ಯದ ಮತ್ತೊಂದು ಚಿತ್ರ ಹುಬ್ಬಳ್ಳಿ ಹಂಟರ್ಸ್. ಗೋಲ್ಡನ್ ಹಾರ್ಸ್ ಸಿನಿಮಾ ಬ್ಯಾನರ್ ಅಡಿ ಅದ್ಧೂರಿಯಾಗಿ ನಿರ್ಮಾಣವಾಗುತ್ತಿರುವ ಈ ಚಿತ್ರದ ಚಿತ್ರೀಕರಣ ಜುಲೈ ತಿಂಗಳ ಆರಂಭದಲ್ಲೇ ಮುಕ್ತಾಯಗೊಂಡಿದ್ದು, ಇದೀಗ ಚಿತ್ರದ ಡಬ್ಬಿಂಗ್ ಕೆಲಸಗಳು ಕೂಡ ಪೂರ್ಣಗೊಂಡಿವೆ. ದಿಗಂತ್ ಮಂಚಾಲೆ ನಟನೆಯ 'ಎಡಗೈಯೇ ಅಪಘಾತಕ್ಕೆ ಕಾರಣ' ಚಿತ್ರದ ಮೂಲಕ ಗಮನ ಸೆಳೆದಿದ್ದ ನಿರ್ದೇಶಕ ಸಮರ್ಥ್ ಬಿ. ಕಡಕೊಳ್ ಅವರು ಈ ಚಿತ್ರಕ್ಕೆ ಕಥೆ, ಚಿತ್ರಕಥೆ ಬರೆದು ಆ್ಯಕ್ಷನ್ ಕಟ್ ಹೇಳುತ್ತಿದ್ದಾರೆ.

ಚಿತ್ರದ ಶೀರ್ಷಿಕೆಯೇ ಸೂಚಿಸುವಂತೆ ಇದು ಪಕ್ಕಾ ಉತ್ತರ ಕರ್ನಾಟಕದ ಸೊಗಡನ್ನು ಒಳಗೊಂಡ ವಿಭಿನ್ನ ಕಥಾಹಂದರ ಇರುವ ಚಿತ್ರವಾಗಿದ್ದು, ಹುಬ್ಬಳ್ಳಿಯಲ್ಲೇ ಚಿತ್ರದ ಮುಹೂರ್ತ ನೆರವೇರಿಸಿಕೊಂಡು ಶೂಟಿಂಗ್ ಆರಂಭಿಸಿತ್ತು. ಚಿತ್ರತಂಡವು ಮೊದಲ ಹಂತದಲ್ಲಿ 14 ದಿನಗಳವರೆಗೆ ಹುಬ್ಬಳ್ಳಿಯ ಪ್ರಮುಖ ಸ್ಥಳಗಳಲ್ಲಿ ಶೂಟಿಂಗ್ ನಡೆಸಿ. ನಂತರ ಶಿರಸಿಯಲ್ಲಿ 22 ದಿನಗಳು ಹಾಗೂ ಧಾರವಾಡದಲ್ಲಿ 2 ದಿನಗಳ ಚಿತ್ರೀಕರಣ ನಡೆಸಿ ಶೂಟಿಂಗ್ ಕೆಲಸಗಳನ್ನು ಯಶಸ್ವಿಯಾಗಿ ಮುಗಿಸಿದೆ. ಸ್ಥಳೀಯ ಪರಿಸರ ಹಾಗೂ ಕಥೆಯ ನೈಜತೆಗೆ ತಕ್ಕಂತೆ ನೈಜತಾಣಗಳಲ್ಲೇ ಚಿತ್ರದ ಚಿತ್ರೀಕರಣ ನಡೆಸಿರುವುದು ಈ ಚಿತ್ರದ ಪ್ರಮುಖ ಆಕರ್ಷಣೆಯಾಗಿದೆ.




ಚೇತನ್ ಮಾರಂಬೀಡ್, ಪವನ್ ಕುಲಕರ್ಣಿ, ಸುಮಿತ್ ಸಂಕೋಜಿ, ನಮನ್ ಅರೋರ, ದೀಪಕ್‌ರಾವ್, ಶಿವು ಗುಂಡಣ್ಣನವರ್, ವಿನಯ್ ದೊಡ್ಡಮನಿ, ಪವನ್ ಅಣ್ಣಿಗೇರಿ ಇವರೊಂದಿಗೆ ಮಹಾನಟಿ ಖ್ಯಾತಿಯ ಧನ್ಯಶ್ರೀ ಸುಜಿತ್ ಮತ್ತು ವನು ಪಾಟೀಲ್ ಮುಖ್ಯ ಭೂಮಿಕೆಯಲ್ಲಿದ್ದಾರೆ. ಹಿರಿಯ ನಟರಾದ ಪ್ರಮೋದ್ ಶೆಟ್ಟಿ, ಅಚ್ಯುತ್‌ಕುಮಾರ್ ಮತ್ತು ಕೃಷ್ಣ ಹೆಬ್ಬಾಳೆ ಕೂಡ ಚಿತ್ರದ ಪ್ರಮುಖ ಪಾತ್ರಗಳಲ್ಲಿ ಬಣ್ಣ ಹಚ್ಚಿದ್ದಾರೆ. ಬಹುತೇಕ ಸೋಷಿಯಲ್ ಮೀಡಿಯಾದ ಜನಪ್ರಿಯ ಕಂಟೆಂಟ್ ಕ್ರಿಯೇಟರ್ಸ್ ಕೂಡ ಬಣ್ಣ ಹಚ್ಚಿರುವುದು ಹುಬ್ಬಳ್ಳಿ ಹಂಟರ್ಸ್ ಚಿತ್ರದ ಮತ್ತೊಂದು ವಿಶೇಷವಾಗಿದೆ.

ನಿರ್ದೇಶಕ ಸಮರ್ಥ್ ಬಿ.ಕಡಕೊಳ್ ಅವರೇ ಈ ಚಿತ್ರಕ್ಕೆ ಕಥೆ ಬರೆದಿದ್ದು, ರಾಹುಲ್ ವಿ.ಪಾರ್ವತಿಕರ್, ಅಮಿತ್ ಕಾವ್ಕರ್ ಮತ್ತು ಚೇತನ್ ಮರಂಬೀದ್ ಅವರೊಂದಿಗೆ ಸೇರಿ ಸಂಭಾಷಣೆ ರಚಿಸಿದ್ದಾರೆ. ಇನ್ನುಳಿದಂತೆ ಈ ಚಿತ್ರಕ್ಕೆ ಅಭಿಮನ್ಯು ಸದಾನಂದನ್ ಅವರ ಛಾಯಾಗ್ರಹಣ ಹಾಗೂ ಪ್ರಸನ್ನ ಕೇಶವ ಅವರ ಸಂಗೀತ ನಿರ್ದೇಶನವಿದ್ದು, ಸದ್ಯದಲ್ಲೇ ಚಿತ್ರವನ್ನು ತೆರೆಯ ಮೇಲೆ ತರಲು ಸಿದ್ಧತೆ ನಡೆಯುತ್ತಿದೆ.

## ಹೈವಾನ್ ಚಿತ್ರದ ಮೊದಲ ಹಾಡು ಬಿಡುಗಡೆ

ಬಾಲಿವುಡ್‌ನ ಬಹುನಿರೀಕ್ಷಿತ ಚಿತ್ರ 'ಹೈವಾನ್'. ಈ ಸಿನಿಮಾದ ಮೊದಲ ಹಾಡು 'ಮೇರೆ ಹೀರೋ ಹೈ ವೋ' ಜೀಮ್ಯೂಸಿಕ್ ಯೂಟ್ಯೂಬ್ ಚಾನೆಲ್‌ನಲ್ಲಿ ಬಿಡುಗಡೆಯಾಗಿದ್ದು, ಸಂಗೀತಪ್ರಿಯರ ಮನ ಗೆಲ್ಲುತ್ತಿದೆ. ಇತ್ತೀಚೆಗಷ್ಟೇ ತೆರೆಕಂಡು ಭರ್ಜರಿ ಪ್ರತಿಕ್ರಿಯೆ ಪಡೆದು-ಕೊಂಡಿದ್ದ ಟೀಸರ್ ಬೆನ್ನಲ್ಲೇ ಈ ಭಾವಪೂರ್ಣ ಹಾಡನ್ನು ಚಿತ್ರತಂಡ ಹಂಚಿಕೊಂಡಿದೆ. ಪ್ರೀತಮ್ ಅವರ ಸುಮಧುರ ಸಂಗೀತ ಸಂಯೋಜನೆ, ಜಾವೇದ್ ಅಖ್ತರ್ ಅವರ ಅರ್ಥಗರ್ಭಿತ ಸಾಹಿತ್ಯ ಹಾಗೂ ಗಾಯಕ ಶಾನ್ ಮತ್ತು ಪುಟಾಣಿ ಗಾಯಕಿ ವನಿಕಾ ನಾಯಕ್ ಅವರ ಕಂಠಸಿರಿಯಲ್ಲಿ ಮೂಡಿಬಂದಿರುವ ಈ ಹಾಡು ಪ್ರೇಕ್ಷಕರನ್ನು ಈ ಚಿತ್ರಕ್ಕೆ ಮತ್ತಷ್ಟು ಹತ್ತಿರವಾಗಿಸಿದೆ.

ರೋಮಾಂಚಕ ಹಾಗೂ ಗಂಭೀರ ಸಸ್ಪೆನ್ಸ್-ಥ್ರಿಲ್ಲರ್ ಕಥಾಹಂದರವನ್ನು ಹೊಂದಿರುವ ಈ ಚಿತ್ರದ ಸೂಕ್ಷ್ಮ ಮತ್ತು ಮುಗ್ಧ ಮುಖವನ್ನು ಈ ಹಾಡು ಅನಾವರಣಗೊಳಿಸಿದೆ. ನಟ ಸೈಫ್ ಅಲಿ ಖಾನ್ ಮತ್ತು ಬಾಲನಟಿ ಪಹಲ್ ಚೌಧರಿ ನಡುವಿನ ಆಪ್ತ ಹಾಗೂ ವಾತ್ಸಲ್ಯಮಯ ಬಾಂಧವ್ಯವನ್ನು ಈ ಹಾಡಲ್ಲಿ ಅತ್ಯಂತ ಸುಂದರವಾಗಿ ಕಟ್ಟಿಕೊಡಲಾಗಿದೆ. ಚಿತ್ರದ ತೀವ್ರತೆಯ ನಡುವೆಯೂ ಪ್ರೀತಿ, ಮಮತೆ ಮತ್ತು ಮುಗ್ಧತೆಯನ್ನು ಸಾರುವ ಬಲವಾದ ಭಾವನಾತ್ಮಕ ಅಡಿಪಾಯವಾಗಿ ಈ ಹಾಡು ಪ್ರೇಕ್ಷಕರ ಗಮನ ಸೆಳೆಯುತ್ತಿದೆ. ಪ್ರಿಯದರ್ಶನ್ ಅವರ ನಿರ್ದೇಶನದ ಈ ಸಿನಿಮಾದಲ್ಲಿ ಅಕ್ಷಯ್‌ಕುಮಾರ್ ಮತ್ತು ಸೈಫ್ ಅಲಿ ಖಾನ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದು, ಬೊಮನ್ ಇರಾನಿ, ಸಯಾಮಿ ಖೇರ್ ಹಾಗೂ ಶ್ರಿಯಾ ಪಿಲ್ಗಾಂವ್ಕರ್ ಪ್ರಮುಖ ತಾರಾಗಣದಲ್ಲಿದ್ದಾರೆ. ಕೆವಿಎನ್ ಪ್ರೊಡಕ್ಷನ್ಸ್ ಮತ್ತು ಥೆಸ್ಪಿಯನ್ ಫಿಲಂಸ್ ಬ್ಯಾನರ್ ಅಡಿಯಲ್ಲಿ ವೆಂಕಟ್ ಕೆ.ನಾರಾಯಣ್ ಹಾಗೂ ಶೈಲಜಾ ದೇಸಾಯಿ ಫೆನ್ ಈ ಚಿತ್ರವನ್ನು ಅದ್ದೂರಿಯಾಗಿ ನಿರ್ಮಿಸಿದ್ದಾರೆ. ಜೀಮ್ಯೂಸಿಕ್ ಕಂಪನಿ ಆಡಿಯೋ ಹಕ್ಕುಗಳನ್ನು ಪಡೆದುಕೊಂಡಿರುವ ಹೈವಾನ್ ಚಿತ್ರವು ಸೆಪ್ಟೆಂಬರ್ 11ರಂದು ವಿಶ್ವದಾದ್ಯಂತ ಚಿತ್ರಮಂದಿರಗಳಲ್ಲಿ ಬಿಡುಗಡೆಯಾಗಲಿದೆ.




## ಕೂರ್ಮಾವತಾರ ಎತ್ತಿದ ಶಿವಣ್ಣ



ಈಗಾಗಲೇ ಎಲ್ಲ ರೀತಿಯ ಪಾತ್ರಗಳನ್ನು ನಿರ್ವಹಿಸಿ ಸೈ ಎನಿಸಿಕೊಂಡಿರುವ ನಟ ಡಾ.ಶಿವರಾಜ್‌ಕುಮಾರ್ ಪ್ಯಾನ್ ಇಂಡಿಯಾ ಸಿನಿಮಾಗೆ ಗ್ರೀನ್ ಸಿಗ್ನಲ್ ನೀಡಿ-ದ್ದಾರೆ. ಶ್ರೀ ಮಹಾವಿಷ್ಣುವಿನ ಎರಡನೇ ಅವತಾರವಾದ 'ಕೂರ್ಮಾವತಾರ' ಕಥಾಹಂದರವನ್ನು ಆಧರಿಸಿ ಸಿದ್ಧವಾಗುತ್ತಿರುವ ಚಿತ್ರಕ್ಕೆ 'ಕೂರ್ಮಾವತಾರ' ಎಂದು ಶೀರ್ಷಿಕೆ ಇಡಲಾಗಿದ್ದು, ಇತ್ತೀಚೆಗೆ ಈ ಚಿತ್ರದ ಟೈಟಲ್ ಟೀಸರ್ ಬಿಡುಗಡೆಯಾಗಿದೆ. ಭಾರತೀಯ ಚಿತ್ರರಂಗದ ಇತಿಹಾಸದಲ್ಲೇ ಕೂರ್ಮಾವತಾರದ ಹಿನ್ನೆಲೆಯ ಕಥೆಯನ್ನು ಪ್ರಧಾನವಾಗಿಟ್ಟುಕೊಂಡು ನಿರ್ಮಾಣವಾಗುತ್ತಿರುವ ಮೊದಲ ಚಿತ್ರ ಇದಾಗಿದ್ದು, ಈಗಾಗಲೇ ಬಿಡುಗಡೆಯಾಗಿರುವ ಟೀಸರ್ ಪ್ರೇಕ್ಷಕರಲ್ಲಿ ಮತ್ತು ಶಿವಣ್ಣನ ಅಭಿಮಾನಿಗಳಲ್ಲಿ ಭಾರಿ ಕುತೂಹಲ ಮೂಡಿಸಿದೆ. ಈ ಚಿತ್ರದಲ್ಲಿ ಶಿವರಾಜಕುಮಾರ್ ಅವರ ಲುಕ್ ಹೇಗಿರಲಿದೆ ಎಂಬುದನ್ನು ನೋಡಲು ಅಭಿಮಾನಿಗಳು ಕೂಡ ಕಾಯುತ್ತಿದ್ದಾರೆ.

ಸಧ್ಯ ಪ್ರೊಡಕ್ಷನ್ ಹಂತದಲ್ಲಿರುವ ಈ ಚಿತ್ರವನ್ನು ಹರ್ಷ ವರ್ಧನ್ ಕಡಿಯಾಲ ಅವರು ನಿರ್ದೇಶಿಸುತ್ತಿದ್ದು, ಪಂಚವಕ್ತ್ರ ಪಿಕ್ಚರ್ಸ್ ಹಾಗೂ ರುಕ್ವಿನಾ ಸ್ಟುಡಿಯೋಸ್ ಬ್ಯಾನರ್ ಅಡಿಯಲ್ಲಿ ಪೂಜಿತ ಕಡಿಯಾಲ ಮತ್ತು ನರೇಂದ್ರಕೊಂಡ ಅವರು ನಿರ್ಮಿಸುತ್ತಿದ್ದಾರೆ. ಈ ಚಿತ್ರದಲ್ಲಿ ಭಾರತೀಯ ಚಿತ್ರರಂಗದ ಹೆಸರಾಂತ ನಟ-ನಟಿಯರ ದಂಡೇ ಇರಲಿದ್ದು, ಶಿವಣ್ಣನ ಜತೆ ತೆಲುಗುನಟ ರಾಜ್ ತರುಣ್, ಶಿವಾಜಿ, ವರಲಕ್ಷ್ಮಿ ಶರತ್‌ಕುಮಾರ್, ಸಾಯಿಕುಮಾರ್, ರಾಜಾ ರವೀಂದ್ರ, ವಿಟಿವಿ ಗಣೇಶ್, ಸಪ್ತಗಿರಿ, ಗೆಟಪ್ ಶ್ರೀನು, ಶತ್ರು, ಮಹೇಶ್ ವಿಟ್ಟ ಮತ್ತು ಅತಿರಾರಾಜ್ ಹೀಗೆ ಪ್ರತಿಭಾವಂತ ಕಲಾವಿದರ ಬಳಗವೇ ಈ ಚಿತ್ರದ ಪಾತ್ರವರ್ಗದಲ್ಲಿದೆ. ದೊಡ್ಡ ಕಲಾವಿದರ ಜತೆ ತಾಂತ್ರಿಕವಾಗಿಯೂ ಕೂರ್ಮಾವತಾರ ಚಿತ್ರವು ಅತ್ಯುನ್ನತ ಮಟ್ಟದಲ್ಲಿ ಮೂಡಿ ಬರಲಿದ್ದು, ಬಿ. ಅಜನೀಶ್ ಲೋಕನಾಥ್ ಅವರು ಈ ಚಿತ್ರಕ್ಕೆ ಸಂಗೀತ ನಿರ್ದೇಶನ ಮಾಡುತ್ತಿದ್ದಾರೆ. ಅಲ್ಲದೆ ಜಗದೀಶ್ ಚೀಕಾಟಿ ಅವರು ಕ್ಯಾಮೆರಾ ವರ್ಕ್ ನಿಭಾಯಿಸುತ್ತಿದ್ದಾರೆ,

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.